ಸಂಪುಟ : 9 ಸಂಚಿಕೆ 242 ಪುಟ : 4 ಬೆಲೆ: 3.00 ಮಂಗಳವಾರ ನವೆಂಬರ್ 5 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 242 Pages : 4 Price : 3.00 Tuesday November 5 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಕಲ್ಯಾಣ ಸಮಿತಿ ಜಿಲ್ಲಾ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯು ನವೆಂಬರ್ 14 ರಿಂದ 16 ರವರೆಗೆ ಬೆಳಗಾವಿ ವಿಭಾಗದಡಿಯಲ್ಲಿ ಬರುವ ಧಾರವಾಡ, ಗದಗ, ಬಾಗಲಕೋಟಿ, ವಿಜಯಪುರ ಹಾಗೂ ಬೆಳಗಾವಿ ಜಿಲ್ಲೆಗಳಲ್ಲಿ ಅಧ್ಯಯನ ಪ್ರವಾಸ ಕೈಗೊಂಡು ಆಯಾ ಜಿಲ್ಲೆಗಳಲ್ಲಿ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಸಮುದಾಯದವರ ಅಭಿವೃದ್ಧಿಗಾಗಿ ಹಮ್ಮಿಕೊಳ್ಳಲಾಗಿರುವ ವಿವಿಧ ಯೋಜನೆಗಳ/ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆ ನಡೆಸಲಿದೆ. ಸಮಿತಿಯ ಅಧ್ಯಕ್ಷರು ಸೇರಿದಂತೆ ಸದಸ್ಯರೂ ಸಹ ಅಧ್ಯಯನ ಪ್ರವಾಸದಲ್ಲಿರುತ್ತಾರೆ.

ಅನುಸೂಚಿತ ಜಾತಿ ಮತ್ತು ಪಂಗಡಗಳ ಕಲ್ಯಾಣ ಸಮಿತಿಯು ನವೆಂಬರ್ 14 ರಂದು ಬೆ 10.30 ಗಂಟೆಗೆ ಧಾರವಾಡ ಜಿಲ್ಲೆಯ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಗದಗ ಜಿಲ್ಲೆಯಲ್ಲಿನ ಅನುಸೂಚಿತ ಜಾತಿ ಮತ್ತು ಪಂಗಡಗಳ ಅಭಿವೃದ್ಧಿಗಾಗಿ ಹಮ್ಮಿಕೊಳ್ಳಲಾಗಿರುವ ವಿವಿಧ ಯೋಜನೆಗಳ/ ಕಾರ್ಯಕ್ರಮಗಳ ಪ್ರಗತಿ ಪರಿಶೀಲನೆ ನಡೆಸಲಿದೆ. ಮಧ್ಯಾಹ್ನ 2.30 ಗಂಟೆಗೆ ಧಾರವಾಡ ಜಿಲ್ಲೆಯ ಪ್ರಗತಿ ಪರಿಶೀಲನೆ ನಡೆಸಿ ನಂತರ ಬಾಗಲಕೋಟೆಯಲ್ಲಿ ವಾಸ್ತವ್ಯ ಮಾಡುವರು.

ಪಿ.ಎಂ.ನರೇಂದ್ರಸ್ವಾಮಿ ಅವರು ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ ಅಧ್ಯಕ್ಷರಾಗಿದ್ದು, ಸದಸ್ಯರು ಈ ಕೆಳಗಿನಂತಿದ್ದಾರೆ.

ರಮೇಶ ಲಕ್ಷ್ಮಣರಾವ್ ಜಾರಕಿಹೊಳಿ, ಡಾ.ಎಂ.ಚಂದ್ರಪ್ಪ, ದುರ್ಯೋಧನ ಐಹೊಳೆ, ಜಿ.ಹಂಪಯ್ಯ ನಾಯಕ್ ಬಲ್ಲಟಗಿ, ಎಸ್. ಎನ್. ಸುಬ್ಬಾರೆಡ್ಡಿ, ಬಸನಗೌಡ ತುರುವಿಹಾಳ್, ಅಬ್ಬಯ್ಯ ಪ್ರಸಾದ್, ಬಸವರಾಜ್ ಮತ್ತಿಮುಡ, ನೇಮಿರಾಜ್ ನಾಯ್ಕ್, ಎನ್. ಶ್ರೀನಿವಾಸಯ್ಯ, ಬಿ. ದೇವೇಂದ್ರಪ್ಪ, ಕೆ.ಸಿ.ವೀರೇಂದ್ರ ಪಪ್ಪಿ, ಕೃಷ್ಣಾ ನಾಯ್ಕ ಕೆ, ಕೆ.ಎಸ್.ಬಸವಂತಪ್ಪ, ಎನ್.ರವಿಕುಮಾರ್, ಡಾ.ಡಿ.ತಿಮ್ಮಯ್ಯ,ರಾಜೇಂದ್ರ ರಾಜನ್ನ, ಸಿ.ಎನ್. ಮಂಜೇಗೌಡ , ಶ್ರೀಮತಿ ಹೇಮಲತಾ ನಾಯಕ.

## ಇಂದು ಪೂರ್ವಭಾವಿ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದನ್ವಯ ನವೆಂಬರ್ 11ರಂದು ಆಚರಿಸಲಾಗುವ ವೀರವನಿತ ಒನಕೆ ಓಬವ್ವ ಜಯಂತಿ ನಿಮಿತ್ತ ನವೆಂಬರ್ 5 ರಂದು ಸಂಜೆ 4 ಗಂಟೆಗೆ ಅಪರ ಜಿಲ್ಲಾಧಿಕಾರಿಗಳು, ಗದಗ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ.

ಸಭೆಗೆ ಹಾಜರಾಗಿ ಸಲಹೆ/ ಅಭಿಪ್ರಾಯ ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಕ್ಫ್ ಮಂಡಳಿಯಿಂದ ಸಾರ್ವಜನಿಕರ ಆಸ್ತಿ ಕಬಳಿಕೆಗೆ ಹುನ್ನಾರ: ಬಿಜೆಪಿಯಿಂದ ಪ್ರತಿಭಟನೆ

## ವಕ್ಫ್ ತಿದ್ದುಪಡಿಗೆ ಒಮ್ಮತದ ನಿರ್ಣಯವಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಕಾಂಗ್ರೆಸ್ ಸಚಿವ ಜಮೀರ್ ಅಹ್ಮದ್ ಖಾನ್ ಹಾಗೂ ಕಾಂಗ್ರೆಸ್ ಸರಕಾರದ ಕುಮ್ಮಕ್ಕಿನಿಂದ ವಕ್ಫ್ ಮಂಡಳಿಯು ಸಾರ್ವಜನಿಕರ ಆಸ್ತಿ ಕಬಳಿಕೆಗೆ ಮುಂದಾಗಿದೆ ಎಂದು ಆರೋಪಿಸಿ ಜಿಲ್ಲಾ ಬಿಜೆಪಿ ಕಾರ್ಯಕರ್ತರು ಸೋಮವಾರ ನಗರದ ಗಾಂಧಿ ವೃತ್ತದಲ್ಲಿ ಪ್ರತಿಭಟನೆ ನಡೆಸಿ, ತಹಸೀಲ್ದಾರ್ ಕಚೇರಿಗೆ ಮುತ್ತಿಗೆ ಹಾಕಿದರು.

ನಗರದ ಮಹಾತ್ಮಾ ಗಾಂಧಿ ವೃತ್ತದಲ್ಲಿ ಪ್ರತಿಭಟನೆ ನಡೆಸಿದ ಬಿಜೆಪಿ ಕಾರ್ಯಕರ್ತರು, ಅಲ್ಲಿಂದ ತಹಸೀಲ್ದಾರ್ ಕಚೇರಿಯವರೆಗೆ ಮೆರವಣಿಗೆ ನಡೆಸಿ ತಹಸೀಲ್ದಾರ್ ಕಚೇರಿಗೆ ಮುತ್ತಿಗೆ ಹಾಕಲು ಯತ್ನಿಸಿದರು. ಪೊಲೀಸರು ಕಾರ್ಯಕರ್ತರು ಕಚೇರಿ ಒಳಗೆ ಪ್ರವೇಶಿಸದಂತೆ ತಡೆದರು. ಈ ವೇಳೆ ಸಚಿವ ಜಮೀರ್ ಅಹ್ಮದ್ ಖಾನ್ ಹಾಗೂ ಎಚ್.ಕೆ. ಪಾಟೀಲ ವಿರುದ್ಧ ಬಿಜೆಪಿ ಕಾರ್ಯಕರ್ತರು ಧಿಕ್ಕಾರ ಕೂಗಿ, ತಹಸೀಲ್ದಾರ್ ಅವರಿಗೆ ಮನವಿ ಸಲ್ಲಿಸಿದರು.

ಪ್ರತಿಭಟನೆಯ ಮುಂದಾಳತ್ವ ವಹಿಸಿ ಮಾತನಾಡಿದ ಬಿಜೆಪಿ ಜಿಲ್ಲಾಧ್ಯಕ್ಷ ರಾಜು



ಕುರುಡಗಿ, ಕೇಂದ್ರ ಸರಕಾರ ವಕ್ಫ್ ಕಾಯಿದೆಗೆ ತಿದ್ದುಪಡಿ ಮಂಡಿಸಿದ ತಕ್ಷಣ ರಾಜ್ಯದಲ್ಲಿ ವಕ್ಫ್ ಮಂಡಳಿಯಿಂದ ದೇಶಾದ್ಯಂತ ಸಾರ್ವಜನಿಕರ ಆಸ್ತಿ ಕಬಳಿಕೆಯಾಗುತ್ತಿದೆ. ಬೆಂಗಳೂರಿನ ವಿಧಾನಸೌಧ, ಪುರಾತನ ದೇವಸ್ಥಾನ, ಮುಗ್ಧ ರೈತರ ಜಮೀನುಗಳು ಸೇರಿದಂತೆ ಹಿಂದೂಗಳಿಗೆ ಸೇರಿದ ಆಸ್ತಿ ಉತಾರದಲ್ಲಿ ವಕ್ಫ್ ಹೆಸರು ನಮೂದಿಸಿ, ಅವುಗಳನ್ನು ಕಬಳಿಸುವ ಸಂಚು ನಡೆದಿದೆ ಎಂದು ಆರೋಪಿಸಿದರು.

ವಕ್ಫ್ ಬೋರ್ಡಿನಿಂದ ಆಗಿರುವ ಅವಾಂತರಗಳಿಂದ ರಾಜ್ಯದಲ್ಲಿ ಶಾಂತಿ–ಸಾಮರಸ್ಯ ಕೆಡುತ್ತಿದೆ. ಎರಡು ಕೋಮುಗಳ ಮಧ್ಯೆ ಸಂಘರ್ಷ ಆರಂಭವಾಗಿದೆ. ರೈತರು ಮತ್ತು ಹಿಂದೂಗಳ ಹಿತರಕ್ಷಣೆಗೆ ಮುಂದಾಗಬೇಕಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಒಂದು ಸಮುದಾಯದ ಓಲೈಕೆಯಲ್ಲಿ ತಲ್ಲೀನರಾಗಿದ್ದಾರೆ ಎಂದು ಆರೋಪಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರಾದ ಎಂ.ಎಸ್. ಕರಿಗೌಡ್ರ, ವಿಜಯಕುಮಾರ ಗಡ್ಡಿ, ನಾಗರಾಜ ಕುಲಕರ್ಣಿ, ಸಿದ್ದು ಪಲ್ಲೇದ, ಸುಧೀರ ಕಾಟಿಗಾರ, ಅನಿಲ ಅಬ್ಬಿಗೇರಿ, ಮಹೇಶ ದಾಸರ, ರಾಘವೇಂದ್ರ ಯಳವತ್ತಿ, ವಿನಾಯಕ ಮಾನ್ವಿ, ಉಷಾ ದಾಸರ, ಚಂದ್ರು ತಡಸದ ಮುಂತಾದವರು ಉಪಸ್ಥಿತರಿದ್ದರು.

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಸಚಿವ ಜಮೀರ್ ಅಹ್ಮದ್ ಖಾನ್ ಅವರೇ ವಕ್ಫ್ ಗೊಂದಲ ಸೃಷ್ಟಿಗೆ ಕಾರಣರಾಗಿದ್ದಾರೆ. ಅಧಿಕಾರಿಗಳ ಮೇಲೆ ಒತ್ತಡ ತಂದು ಸಾರ್ವಜನಿಕರ ಆಸ್ತಿಯನ್ನು ಕಬಳಿಸುವ ಕೆಲಸ ಮಾಡುತ್ತಿರುವುದು ಖಂಡನೀಯ. ಕೂಡಲೇ ಸಚಿವ ಜಮೀರ್ ಅಹ್ಮದ್ ಖಾನ್‌ರನ್ನು ಸಚಿವ ಸಂಪುಟದಿಂದ ಉಚ್ಚಾಟಿಸಬೇಕು. ವಕ್ಫ್ ಆಸ್ತಿ ವಿಷಯವಾಗಿ ಉಂಟಾಗಿರುವ ಗೊಂದಲದ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜ್ಯದ ಜನರ ಕ್ಷಮೆ ಯಾಚಿಸಬೇಕು. ವಕ್ಫ್ ಅದಾಲತ್ ನಡೆಸದಂತೆ ಆದೇಶ ಹೊರಡಿಸಬೇಕು. ಅಲ್ಲದೆ, ಕೇಂದ್ರ ಸರಕಾರ ಜಾರಿಗೊಳಿಸಲು ಉದ್ದೇಶಿಸಿರುವ ವಕ್ಫ್ ತಿದ್ದುಪಡಿ ಕಾಯಿದೆಗೆ ಒಮ್ಮತದ ನಿರ್ಣಯ ಅಂಗೀಕರಿಸಬೇಕು ಎಂದು ಒತ್ತಾಯಿಸಿದರು.

### ಪತ್ರಿಕಾಗೋಷ್ಠಿಯಲ್ಲಿ ಜೆಡಿಎಸ್ ರಾಜ್ಯ ವಕ್ತಾರ ವೆಂಕನಗೌಡ ಗೋವಿಂದಗೌಡ್ರ ಪ್ರಶ್ನೆ

## ವಸ್ತು ಸಂಗ್ರಹಾಲಯಕ್ಕೆ ಇಷ್ಟೊಂದು ಖರ್ಚೇಕೆ?

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ವಸ್ತುಸಂಗ್ರಹಾಲಯಕ್ಕೆ ಬೆರಳೆಣಿಕೆಯ ಪ್ರವಾಸಿಗರು ಮಾತ್ರ ಭೇಟಿ ನೀಡುತ್ತಾರೆ. ರಾತ್ರಿಯಾದರೆ ಅದು ಕುಡುಕರ ಅಡ್ಡೆಯಾಗಿ ಬದಲಾಗುತ್ತದೆ. ಅಂತಹ ವಸ್ತು ಸಂಗ್ರಹಾಲಯಕ್ಕೆ 6.97 ಕೋಟಿ ರೂ. ವೆಚ್ಚ ಮಾಡುವ ಅಗತ್ಯವಿತ್ತೇ ಎಂದು ಜೆಡಿಎಸ್ ರಾಜ್ಯ ವಕ್ತಾರ ವೆಂಕನಗೌಡ ಗೋವಿಂದಗೌಡ್ರ ಪ್ರಶ್ನಿಸಿದರು.

ಸೋಮವಾರ ನಗರದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಸಚಿವ ಎಚ್.ಕೆ. ಪಾಟೀಲರು ಕೇವಲ 6 ಸಾವಿರ ಚದರ ಅಡಿ ಇರುವ ಗದಗ ವಸ್ತು ಸಂಗ್ರಹಾಲಯದ ಒಳಗಾಂಗಣ ವಿನ್ಯಾಸಕ್ಕೆ 6.97 ಕೋಟಿ ರೂ. ಅನುದಾನ ಬಳಕೆ ಮಾಡಿರುವುದರ ಹಿಂದೆ ದುಡ್ಡು ಹೊಡೆಯುವ ಹುನ್ನಾರವಿದೆ ಎಂದು ಆರೋಪಿಸಿದರು.

ಪಂ. ಪುಟ್ಟರಾಜ ಗವಾಯಿಗಳ ಸ್ಮಾರಕ ಭವನದ ಕಾಮಗಾರಿ ಅನುದಾನದ ಕೊರತೆಯಿಂದ ಅರ್ಧಕ್ಕೇ ನಿಂತಿದೆ. ಅಂತಹ ಸಮಾಜಮುಖಿ ಕೆಲಸಕ್ಕೆ ನುದಾನ ಒದಗಿಸದೇ ವಸ್ತು ಸಂಗ್ರಹಾಲಯ ಅಭಿವೃದ್ಧಿಗೆ ಕೋಟಿ ಕೋಟಿ ಹಣ ಖರ್ಚು ಮಾಡುವುದರ ಹಿಂದೆ ಭ್ರಷ್ಟಾಚಾರದ ಅನುಮಾನ ಮೂಡುತ್ತದೆ ಎಂದು ಆರೋಪಿಸಿದರು.

ಗದಗ ನಗರದ ವೀರನಾರಾಯಣ ದೇವಸ್ಥಾನದ



ಪುನರುತ್ಥಾನ ಕಾಮಗಾರಿಯನ್ನು ತರಾತುರಿಯಲ್ಲಿ ನಡೆಸಿದ್ದೇಕೆ ಎಂದು ಪ್ರಶ್ನೆ ಮಾಡಿದ ಅವರು, ವೀರನಾರಾಯಣ ದೇವಸ್ಥಾನಕ್ಕೆ ಸಂಬಂಧಿಸಿದಂತೆ ಅನೇಕ ಪ್ರಕರಣಗಳು ನ್ಯಾಯಾಲಯದಲ್ಲಿ ಇದ್ದಾಗ್ಯೂ ತೆರವುಗೊಳಿಸಲಾಗಿದೆ. ಜನರ ವಿಶ್ವಾಸದೊಂದಿಗೆ ಕಾಮಗಾರಿ ನಡೆಸುವುದು ಬಿಟ್ಟು ಪೊಲೀಸ್ ಬಲ ಪ್ರಯೋಗದೊಂದಿಗೆ ಪುನರುತ್ಥಾನ ಕಾಮಗಾರಿ ನಡೆಸಿದ್ದು ಅನುಮಾನಕ್ಕೆ ಕಾರಣವಾಗಿದೆ. ಈ ಬಗ್ಗೆ ಸಮಗ್ರ ಮಾಹಿತಿ ಸಂಗ್ರಹಿಸಲು ಜೆಡಿಎಸ್ ಉಪಾಧ್ಯಕ್ಷ ಗಿರೀಶ ನೇತೃತ್ವದಲ್ಲಿ ಅ. 5ರಂದು ವೀರನಾರಾಯಣ ದೇವಸ್ಥಾನಕ್ಕೆ ಭೇಟಿ ನೀಡಲಾಗುವುದು ಎಂದ ಅವರು, ಪ್ರಕರಣ ಕೋರ್ಟನಲ್ಲಿರುವ ಕಾರಣ ವಕಾರಸಾಲು ತೆರವು ಸಂದರ್ಭದಲ್ಲಿ ಎರಡು ಮದ್ಯದಂಗಡಿ ಬಿಟ್ಟು ಉಳಿದೆಲ್ಲ ವಕಾರಗಳನ್ನು ಒಡೆದರು. ಆದರೆ ದೇವಸ್ಥಾನದ ವಿಷಯ ಕೋರ್ಟಿನಲ್ಲಿದ್ದರೂ ಒಡೆದಿರುವುದರ ಹಿಂದಿನ ಉದ್ದೇಶವೇನು ಎಂದು ಪ್ರಶ್ನಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಜೆಡಿಎಸ್ ಮುಖಂಡರಾದ ಗಿರೀಶ ಸಂಶಿ, ಕೆ.ಎಫ್. ದೊಡ್ಡಮನಿ, ಬಸವರಾಜ ಅಪ್ಪಣ್ಣವರ, ಸಂತೋಷ ಪಾಟೀಲ, ಜೋಸೆಫ್ ಉದೋಜಿ, ರಮೇಶ ಹುಣಸಿಮರದ ಮುಂತಾದವರು ಉಪಸ್ಥಿತರಿದ್ದರು.

ಸಚಿವ ಜಮೀರ ಅಹ್ಮದ್ ಸಮಾಜದ ಸ್ವಾಸ್ಥ್ಯ ಹಾಳು ಮಾಡುವ ಕಾರ್ಯಕ್ಕೆ ಮುಂದಾಗಿದ್ದಾರೆ. ಜಿಲ್ಲೆಯಲ್ಲೂ ಅನೇಕ ರೈತರು, ಶಾಲೆ, ದೇವಸ್ಥಾನದ ಆಸ್ತಿಯಲ್ಲಿ ವಕ್ಫ್ ಎಂದು ನಮೂದಾಗಿರುವುದು ಗಮನಕ್ಕೆ ಬಂದಿದ್ದು, ಅಂಥವರು ನೆರವು ಕೋರಿದರೆ ಜೆಡಿಎಸ್‌ನಿಂದ ಉಚಿತ ಕಾನೂನು ನೆರವು ನೀಡಲಾಗುವುದು ಎಂದು ವೆಂಕನಗೌಡ ಗೋವಿಂದಗೌಡ್ರ ತಿಳಿಸಿದರು.

> ದೇಶದ ಧನಿಕರ ಸಂಪತ್ತನ್ನು ಬಡವರಿಗೆ ಹಂಚಿಕೆ ಮಾಡಬೇಕು ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಪ್ರತಿಪಾದಿಸಿದ್ದಾರೆ. ಅದಕ್ಕೂ ಮುನ್ನ ಕಾಂಗ್ರೆಸ್ ಪಕ್ಷದ ಶ್ರೀಮಂತರ ಆಸ್ತಿಯನ್ನು ವಕ್ಫ್ ಬೋರ್ಡ್‌ಗೆ ಹಸ್ತಾಂತರ ಮಾಡಲಿ. ಅದಾದ ನಂತರ ಸಿರಿವಂತರ ಆಸ್ತಿಯನ್ನು ಬಡವರಿಗೆ ಹಂಚಿಕೆ ಮಾಡಲಿ.
> – **ವೆಂಕನಗೌಡ ಗೋವಿಂದಗೌಡ್ರ**, ಜೆಡಿಎಸ್ ರಾಜ್ಯ ವಕ್ತಾರ.

## ಸರ್ಕಾರಿ ವಸ್ತು ಸಂಗ್ರಹಾಲಯ ಕಾಮಗಾರಿಯ ಶಿಲಾನ್ಯಾಸ



■ವಿಜಯಸಾಕ್ಷಿ ಸುದ್ದಿ, ಗದಗ

ಮೈಸೂರ ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯಿಂದ ಗದುಗಿನಲ್ಲಿನ ಸರ್ಕಾರಿ ವಸ್ತು ಸಂಗ್ರಹಾಲಯದ ಒಳಾಂಗಣ ವಿನ್ಯಾಸ ಕಾಮಗಾರಿಯ ಭೂಮಿಪೂಜೆ ಹಾಗೂ ಶಿಲಾನ್ಯಾಸ ನೆರವೇರಿತು.

6.97 ಕೋಟಿ ರೂ. ವೆಚ್ಚದಲ್ಲಿ ಸರ್ಕಾರಿ ವಸ್ತು ಸಂಗ್ರಹಾಲಯದ ಒಳಾಂಗಣ ವಿನ್ಯಾಸ ಕಾಮಗಾಲರಿಯ ಭೂಮಿ ಪೂಜೆ ಹಾಗೂ ಶಿಲಾನ್ಯಾಸವನ್ನು ರವಿವಾರ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್. ಕೆ. ಪಾಟೀಲ ನೆರವೇರಿಸಿದರು.

ಈ ಸಂದರ್ಭದಲ್ಲಿ ಸರ್ಕಾರಿ ಮುಖ್ಯ ಸಚೇತಕರು ಹಾಗೂ ಶಾಸಕರಾದ ಸಲೀಂ ಅಹ್ಮದ, ಬಿ.ಬಿ. ಅಸೂಟಿ, ಸಿದ್ದು ಪಾಟೀಲ, ಅ.ದ. ಕಟ್ಟಿಮನಿ, ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ಆಯುಕ್ತರಾದ ದೇವರಾಜ ಎ ಸೇರಿದಂತೆ ಹಲವರು ಹಾಜರಿದ್ದರು.

### ಭೀಷ್ಮ ಕೆರೆಗೆ ಸಚಿವ ಎಚ್.ಕೆ. ಪಾಟೀಲ ಬಾಗಿನ ಅರ್ಪಣೆ

## ಭೀಷ್ಮ ಕೆರೆ ಜನರನ್ನು ಆಶೀರ್ವದಿಸಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಭೀಷ್ಮ ಕೆರೆಯಿಂದ ನಗರದ ಸೌಂದರ್ಯ ಜೊತೆಗೆ ನಗರದ ಅಂತರ್ಜಲ ಹೆಚ್ಚಾಗಿ ಜನರಿಗೆ ನೆಮ್ಮದಿಯನ್ನು ತಂದಿದೆ ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ನಗರದ ಭೀಷ್ಮ ಕೆರೆಯ ದಂಡೆಯ ಮೇಲೆ ಜಿಲ್ಲಾಡಳಿತ, ನಗರಸಭೆ ಸಂಯುಕ್ತ ಆಶ್ರಯದಲ್ಲಿ



ರವಿವಾರ ಏರ್ಪಡಿಸಿದ್ದ ಭೀಷ್ಮ ಕೆರೆಯ ಗಂಗಾ ಪೂಜೆ ನೆರವೇರಿಸಿ, ಬಾಗಿನ ಅರ್ಪಿಸಿ ಅವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ಸರ್ವಧರ್ಮದ ಪೂಜ್ಯರು ಪಾಲ್ಗೊಂಡಿದ್ದರಿಂದ ಪೂಜೆಯ ವಿಶೇಷತೆ ಹೆಚ್ಚಾಗಿದೆ. ಗದಗಿನ ಅಂತರ್ಜಲವನ್ನು ಹೆಚ್ಚಿಸಿರುವ ಜಲ ಸಂಗ್ರಹ ಎಲ್ಲರಿಗೂ ಸಮಾಧಾನ, ನೆಮ್ಮದಿ ಮತ್ತು ಅನುಕೂಲವನ್ನು ಒದಗಿಸಿದೆ. 70 ಕಿ.ಮೀ ದೂರದ ತುಂಗಭದ್ರ ನದಿಯಿಂದ ನೀರನ್ನು ತಂದು ಭೀಷ್ಮ ಕೆರೆಯನ್ನು ತುಂಬಿಸಿ ಈ ಪ್ರದೇಶದ ಜನರಿಗೆ ಅನುಕೂಲಕ್ಕಾಗಿ ನಿರ್ಮಿಸಿದ ಕೆರೆಯೂ ಇಂದು ತುಂಬಿದ್ದಕ್ಕೆ ಬಾಗಿನ ಅರ್ಪಿಸಿದ್ದೇವೆ. ಹೀಗೆಯೇ ಸದಾಕಾಲ ಭೀಷ್ಮ ಕೆರೆ ತುಂಬಿ ನಗರದ ಜನರನ್ನು ಆಶೀರ್ವದಿಸಲಿ ಎಂದು ಪ್ರಾರ್ಥಿಸಿದರು.

ತೋಂಟದಾರ್ಯ ಮಠದ ಸಿದ್ಧರಾಮ ಸ್ವಾಮೀಜಿ ಸಾನ್ನಿಧ್ಯ ವಹಿಸಿ ಮಾತನಾಡಿ, ನೀರು ಮನುಷ್ಯನಿಗೆ ಅತ್ಯಂತ ಪ್ರಮುಖವಾಗಿದೆ. ಪಂಚಭೂತಗಳಾದ ಅಗ್ನಿ, ಭೂಮಿ, ವಾಯು, ಆಕಾಶ, ನೀರಿನಿಂದ ಮಾನವ ಶರೀರ ನಿರ್ಮಿತವಾಗಿದ್ದನ್ನು ನಮ್ಮ ಹಿರಿಯರು ಗಮನಿಸಿ ಪಂಚಭೂತಗಳಿಗೆ ಪ್ರಾರಂಭದಿಂದಲೂ ಗೌರವವನ್ನು ನೀಡಿದ್ದಾರೆ. ನೀರು ಅತ್ಯಂತ ಪವಿತ್ರವಾದದ್ದು. ಭೀಷ್ಮ ಕೆರೆಯು ಗದಗ ನಗರದ ಜನರ ನೀರಿನ ದಾಹವನ್ನು ತಣಿಸಿರುವ ಜೀವನಾಡಿಯಾಗಿದೆ ಎಂದರು.

ಕಾರ್ಯಕ್ರಮದಲ್ಲಿ ವಿವಿಧ ಧರ್ಮದ ಗುರುಗಳು, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಕೆಡಿಪಿ ಸದಸ್ಯ ಡಿ.ಆರ್. ಪಾಟೀಲ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕಾಧ್ಯಕ್ಷ ಅಶೋಕ ಮಂದಾಲಿ, ಎಸ್.ಎನ್. ಬಳ್ಳಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಸೇರಿದಂತೆ ಹಲವರು ಹಾಜರಿದ್ದರು. ಗದಗ–ಬೆಟಗೇರಿ ನಗರಸಭೆ ಪೌರಾಯುಕ್ತ ಮಹೇಶ ಪೋತದಾರ ಕಾರ್ಯಕ್ರಮ ನಿರ್ವಹಿಸಿದರು.

> ದೂರದ ತುಂಗಭದ್ರಾ ನದಿಯಿಂದ ಭೀಷ್ಮ ಕೆರೆಗೆ ನೀರನ್ನು ತಂದು ಮಹತ್ವಪೂರ್ಣ ಸಾಧನೆ ಮಾಡಿ ಈ ಪ್ರದೇಶದ ಜನರಿಗೆ ಅನುಕೂಲ ಮಾಡಿರುವ ಸಚಿವ ಎಚ್.ಕೆ. ಪಾಟೀಲ ಅವರು ಅಭಿನವ ಭಗೀರಥರಾಗಿದ್ದಾರೆ. ಭೀಷ್ಮ ಕೆರೆಯಿಂದ ಅಂತರ್ಜಲ ಸಮೃದ್ಧಿ ಆಗುವುದರ ಜೊತೆಗೆ ಈ ಪ್ರದೇಶವನ್ನು ಪ್ರವಾಸಿ ತಾಣವನ್ನಾಗಿಸಿದ್ದು ವಿಶೇಷ. ಇಲ್ಲಿನ ಭವ್ಯ ಬಸವೇಶ್ವರ ಮೂರ್ತಿಯನ್ನು ಕಣ್ತುಂಬಿಕೊಂಡು ಭೀಷ್ಮ ಕೆರೆಯಲ್ಲಿ ಬೋಟಿಂಗ್ ಮೂಲಕ ಜಲವಿಹಾರ ಮಾಡಿ ಆನಂದಿಸುತ್ತಿದ್ದಾರೆ ಎಂದು ತೋಂ. ಸಿದ್ಧರಾಮ ಸ್ವಾಮೀಜಿ ಹೇಳಿದರು.



## ಸಂಪಾದಕೀಯ

# ಸೌಹಾರ್ದತೆ ಕದಡಿದ ವಕ್ಫ್

ರಾಜ್ಯದಲ್ಲಿ ವಕ್ಫ್ ವಿವಾದ ದಿನದಿಂದ ದಿನಕ್ಕೆ ತಾರಕಕ್ಕೆ ಏರುತ್ತಿದೆ. ರೈತರಿಗೆ ನೀಡಲಾಗಿದ್ದ ಎಲ್ಲ ನೋಟಿಸ್ ಹಿಂಪಡೆಯುವುದಾಗಿ ಸಿಎಂ ಸಿದ್ದರಾಮಯ್ಯ ಹೇಳಿದ್ದರೂ ರಾಜ್ಯದೆಲ್ಲೆಡೆ ಸಾರ್ವಜನಿಕರ ಆಸ್ತಿಗಳಲ್ಲಿ ವಕ್ಫ್ ನಮೂದು ಪತ್ತೆಯಾಗುತ್ತಲೇ ಇದೆ. ವಕ್ಫ್ ಬೋರ್ಡಿನಿಂದ ನೋಟಿಸ್ ಬರದಿದ್ದರೂ ತಮ್ಮ ಆಸ್ತಿಯಲ್ಲಿ ವಕ್ಫ್ ಎಂದು ನಮೂದಾಗಿರುವುದು ಗೊತ್ತಾಗುತ್ತಿದ್ದಂತೆ ಜನ ಆವೇಶ, ಅಕ್ರೋಶ ವ್ಯಕ್ತಪಡಿಸುತ್ತಲೆ ಇದ್ದಾರೆ.

ಜನರ ಈ ಭಾವನೆಯನ್ನು ಬಂಡವಾಳ ಮಾಡಿಕೊಂಡು ಪ್ರತಿಪಕ್ಷಗಳು ಬೀದಿಗಿಳಿದು ಹೋರಾಟ ಮಾಡುತ್ತಿವೆ. ಉತಾರದಲ್ಲಿ ವಕ್ಫ್ ಎಂದು ನಮೂದಾದ ಮಾತ್ರಕ್ಕೆ ಆಸ್ತಿ ಅವರಿಗೆ ಹೋಗುವುದಿಲ್ಲ ಎನ್ನುವ ಸತ್ಯ ಗೊತ್ತಿದ್ದರೂ ಪ್ರತಿಪಕ್ಷ ನಾಯಕರು ಜನರಿಗೆ ತಪ್ಪು ಮಾಹಿತಿ ನೀಡಿ ಜನರನ್ನು ಮತ್ತಷ್ಟು ಉತ್ತೇಜಿಸುತ್ತಿದ್ದಾರೆ. ಸದ್ಯ ಉಂಟಾಗಿರುವ ವಕ್ಫ್ ವಿವಾದ ಹಿಂದಿನ ಸರಕಾರದಲ್ಲೂ ಆಗಿತ್ತು. ಆದರೆ ಸಿದ್ದರಾಮಯ್ಯ ದುರಾದೃಷ್ಟ, ಈ ಅವಧಿಯಲ್ಲಿ ವಿವಾದ ತಾರಕಕ್ಕೆ ಏರಿದ್ದು ಮಾತ್ರವಲ್ಲದೇ ಸರಕಾರದ ವಿರುದ್ಧ ಜನಾಕ್ರೋಶ ಮೂಡುವಂತಾಯಿತು.

ವಕ್ಫ್ ವಿವಾದ ನಿರ್ವಹಿಸುವಲ್ಲಿ ಕಾಂಗ್ರೆಸ್ ಸರಕಾರವೂ ಎಡವಿದೆ. ಅದರಲ್ಲೂ ಸಚಿವ ಜಮೀರ್ ಅಹ್ಮದ್ ಖಾನ್ ಉದ್ಧಟತನದ ಹೇಳಿಕೆಗಳು ಅಲ್ಪಸಂಖ್ಯಾತರ ಓಲೈಕೆಗಿಂತ ಬಹುಸಂಖ್ಯಾತರ ವಿರೋಧ ಕಟ್ಟಿಕೊಳ್ಳುವಂತಾಯಿತು. ವಿವಾದ ತಾರಕಕ್ಕೆ ಏರುತ್ತಿದ್ದಂತೆ ಸರಕಾರ ಎಚ್ಚೆತ್ತು ನೋಟಿಸ್ ಹಿಂಪಡೆಯುವುದು, ವಕ್ಫ್ ನಮೂದು ತೆಗೆದು ಹಾಕುವ ನಿರ್ಧಾರಕ್ಕೆ ಬಂದಿದೆ.

ಆದರೆ ಈ ವಿವಾದ ಕೋಮು ಸೌಹಾರ್ದ ಕದಡುವ ಕೆಲಸ ಮಾಡಿದೆ. ವಕ್ಫ್ ಆಸ್ತಿಯಿಂದ ಅಲ್ಪಸಂಖ್ಯಾತ ಸಮುದಾಯದ ಜನರಿಗೆ ನಯಾಪೈಸೆ ಉಪಯೋಗ ಆಗಿಲ್ಲ. ಆದರೆ ಎಲ್ಲರ ಜೊತೆ ಸೌಹಾರ್ದಯುತವಾಗಿ ಬದುಕುತ್ತಿರುವ ಸಾಮಾನ್ಯ ಮುಸ್ಲಿಂರನ್ನು ಅನುಮಾನದಿಂದ, ತಾತ್ಸಾರದಿಂದ ನೋಡುವಂತ ವಾತಾವರಣ ಸೃಷ್ಟಿಯಾಗಿದೆ. ಹಿಂದೂ– ಮುಸ್ಲಿಂರಲ್ಲಿ ದ್ವೇಷ ಹೆಚ್ಚಾಗಲು ಕಾರಣವಾಗಿದೆ. ಇದಕ್ಕೆಲ್ಲ ಕಾಂಗ್ರೆಸ್ ಸರಕಾರವೇ ಕಾರಣ. ಕಾಂಗ್ರೆಸ್ ಸರಕಾರದಿಂದ ಮುಸ್ಲಿಂರ ಕಲ್ಯಾಣವೂ ಆಗಲಿಲ್ಲ, ಕೋಮು ಸೌಹಾರ್ದದಿಂದ ಬದುಕುವ ವಾತಾವರಣವೂ ಸೃಷ್ಟಿಯಾಗಲಿಲ್ಲ.

# ಸುಳ್ಳು ಹೇಳುವ ಪ್ರಧಾನಿ ಇದ್ರೆ ಅದು ಮೋದಿ ಮಾತ್ರ

■ ವಿಜಯಸಾಕ್ಷಿ ಸುದ್ದಿ, ರಾಯಚೂರು

ಸುಳ್ಳು ಹೇಳುವ ಪ್ರಧಾನಿ ಇದ್ರೆ ಅದು ಮೋದಿ ಮಾತ್ರ ಎಂದು ಹೇಳುವ ಮೂಲಕ ಹೆಚ್.ಎಂ.ರೇವಣ್ಣ ವ್ಯಂಗ್ಯವಾಡಿದ್ದಾರೆ.

ಗ್ಯಾರಂಟಿಗಳ ಬಗ್ಗೆ ಪ್ರಧಾನಿ ಮೋದಿ ವಾಗ್ದಾಳಿ ವಿಚಾರಕ್ಕೆ ಪ್ರತಿಕ್ರಿಯಿಸಿದ ಊಒ ರೇವಣ್ಣ, ನನ್ನ ಇಡೀ ಜೀವನದಲ್ಲಿ ಇಂತಹ ಪ್ರಧಾನಿಯನ್ನು ನೋಡಿರಲಿಲ್ಲ. ಸುಳ್ಳು ಹೇಳುವ ಪ್ರಧಾನಿ ಇದ್ದರೆ ಅದು ಮೋದಿನೇ ಎಂದರು.

ರಾಜ್ಯದಲ್ಲಿ ಗ್ಯಾರಂಟಿಗಳು ನಡೆಯುವುದೇ ಇಲ್ಲ ಎಂದಿದ್ದರು. ಆದರೆ ಈಗ ಅವರೇ ಮೋದಿ ಗ್ಯಾರಂಟಿ ಎಂದು ಪ್ರಚಾರ ಮಾಡಿದರು. ಅವರ ಆಡಳಿತ ಇರುವ ಮಧ್ಯಪ್ರದೇಶದಲ್ಲಿ 1,200 ರೂ. ಕೊಡುತ್ತಿದ್ದಾರೆ.

ಚುನಾವಣೆ ವೇಳೆ ಏನಾದರೂ ಒಂದು ಭಾಷಣ ಮಾಡಿಬಿಡುವುದು ಮೋದಿಯವರ ಒಂದು ಕಲೆಯಾಗಿದೆ. ಅದಕ್ಕೆ ತಿರುಳು ಇರಲ್ಲ. ಇಂತಹ ಪ್ರಧಾನ ಮಂತ್ರಿಯನ್ನು ನಾನಂತೂ ನನ್ನ ಜೀವನದಲ್ಲಿ ನೋಡಿರಲಿಲ್ಲ. ಸುಳ್ಳು ಹೇಳುವ ಪ್ರಧಾನಿ ಇದ್ದರೆ ಅದು ಮೋದಿನೇ ಎಂದು ಹೇಳಿದರು.

ಆಸ್ಸಾಂ ಹೊತ್ತಿಕೊಂಡು ಉರಿದರೂ ಮಾತನಾಡಲ್ಲ, ಉತ್ತರ ಪ್ರದೇಶದಲ್ಲಿ ಹೆಣ್ಮಕ್ಕಳ ಬಗ್ಗೆ ತೊಂದರೆ ಆದರೂ ಮಾತನಾಡಲ್ಲ. ಆದರೆ ವಿರೋಧ ಪಕ್ಷ ಎಲ್ಲೆಲ್ಲಿ ಆಡಳಿತ ಮಾಡುತ್ತೋ ಅಲ್ಲಲ್ಲಿ ಮೋದಿ ಕೆದಕೋಕೆ ನೋಡುತ್ತಾರೆ ಎಂದು ವಾಗ್ದಾಳಿ ನಡೆಸಿದರು.

## ಪತ್ರಿಕಾಗೋಷ್ಠಿಯಲ್ಲಿ ತಾ.ಪಂ ಮಾಜಿ ಸದಸ್ಯ ಚನ್ನಪ್ಪ ಜಗಲಿ ಹೇಳಿಕೆ

# ಹೋರಾಟದಿಂದ ಸಮಸ್ಯೆ ಪರಿಹಾರವಾಗದು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಕಳೆದ ತಿಂಗಳ 12ರಂದು ನಡೆದ ಸಣ್ಣ ಘಟನೆಯನ್ನೇ ಕಾರಣವಾಗಿಟ್ಟುಕೊಂಡು ಪಟ್ಟಣದಲ್ಲಿ ಬಂದ್, ಧರಣಿ ಸತ್ಯಾಗ್ರಹಗಳು ನಡೆಯುತ್ತಿದ್ದು, ಇವುಗಳನ್ನು ಆದಷ್ಟು ಬೆಳವಣಿಗೆಯಾಗದಂತೆ ಎಲ್ಲರೂ ಕುಳಿತು ಚರ್ಚಿಸಿ ತಿಳಿಗೊಳಿಸುವ ಕಾರ್ಯ ಮಾಡಬೇಕು ಎಂದು ತಾ.ಪಂ ಮಾಜಿ ಸದಸ್ಯ ಚನ್ನಪ್ಪ ಜಗಲಿ ಹೇಳಿದರು.

ಅವರು ಪಟ್ಟಣದ ಪತ್ರಿಕಾ ಕಾರ್ಯಾಲಯದಲ್ಲಿ ನಡೆಸಿದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಕಳೆದ ತಿಂಗಳ 12ರಂದು ಗೋಸಾವಿ ಸಮಾಜದವರು ಹಾಗೂ ಕೆಲವು ಕಿಡಿಗೇಡಿಗಳ ನಡುವೆ ಕ್ಷುಲ್ಲಕ ಕಾರಣಕ್ಕೆ ನಡೆದ ಗಲಾಟೆಯ ಕಾರಣಕ್ಕಾಗಿ ಲಕ್ಷ್ಮೇಶ್ವರ ಬಂದ್ ಮಾಡುವುದು, ರಸ್ತೆ ಬಂದ್, ಪ್ರತಿಭಟನೆ ಇತ್ಯಾದಿಗಳು 20 ದಿನಗಳಿಂದ ನಡೆಯುತ್ತಿದ್ದರೂ ಉದ್ದೇಶ ಜನರಿಗೆ ಅರ್ಥವಾಗುತ್ತಿಲ್ಲ. ಪಿಎಸ್‌ಐ ಅವರು ತಪ್ಪು ಮಾಡಿದ್ದರೆ ಅದನ್ನು ಹಿರಿಯರಿಗೆ ಮತ್ತು ಇಲಾಖೆ ಅಧಿಕಾರಿಗಳೊಂದಿಗೆ ಮಾತನಾಡಿ ಘಟನೆಯನ್ನು ತಿಳಿಗೊಳಿಸಬಹುದಾಗಿತ್ತು. ಅಮಾಯಕರ ಮೇಲೆ ಹಲ್ಲೆ ನಡೆದಿದ್ದರೆ




ನಾವು ಸಹ ಅದನ್ನು ಖಂಡಿಸುತ್ತೇವೆ. ಆದರೆ ಇದನ್ನೇ ಆಧಾರವಾಗಿಟ್ಟುಕೊಂಡು ಹೋರಾಟ ಮಾಡುತ್ತಿರುವದರಿಂದ ಸಮಸ್ಯೆಗಳು ಪರಿಹಾರವಾಗುವದಿಲ್ಲ ಎಂದರು.

ಇಂತಹ ಘಟನೆಯಿಂದ ಭಯದ ವಾತಾವರಣ ನಿರ್ಮಾಣವಾಗಿದೆ. ಇದರಿಂದ ವ್ಯಾಪಾರಸ್ಥರಿಗೆ, ಪಟ್ಟಣಕ್ಕೆ ಬರುವ ಜನರಿಗೆ ತೊಂದರೆ ಆಗುತ್ತಿದೆ. ಗೋಸಾವಿ ಸಮಾಜದವರು ಬಡವರಾಗಿದ್ದು, ಇತರೆ ಸಮಾಜದವರೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದಾರೆ. ಅಧಿಕಾರ ಮತ್ತು ಅಧಿಕಾರಿಗಳು ಇಂದು ಬಂದು ನಾಳೆ ಹೋಗಬಹುದು. ಆದರೆ ಗೋಸಾವಿ ಸಮಾಜದವರನ್ನು ಬಾವಿಗೆ ಇಳಿಸುವ ಕೆಲಸ ಆಗುತ್ತಿದೆ. ಸಮಸ್ಯೆಯನ್ನು ಹಿರಿಯರ ಮಧ್ಯೆ ಕುಳಿತು ಬಗೆಹರಿಸಿಕೊಳ್ಳುವ ಕಾರ್ಯ ಮಾಡಿ ಎಂದು ಗೋಸಾವಿ ಸಮಾಜದವರಿಗೆ ಈ ಮೂಲಕ ಮನವಿ ಮಾಡುತ್ತೇವೆ ಎಂದರು.

ಇಂತಹ ಘಟನೆಯನ್ನು ತಿಳಿಗೊಳಿಸುವದಕ್ಕೆ ಶಾಸಕರು ಆದ್ಯತೆ ನೀಡಲಿ. ಗೋಸಾವಿ ಸಮಾಜದವರು ಪ್ರತಿಭಟನೆಯನ್ನು ಕೈಬಿಟ್ಟು ಮಾತುಕತೆಯ ಮೂಲಕ ಬಗೆಹರಿಸಿಕೊಳ್ಳಲು ಸಾರ್ವಜನಿಕರ ಪರವಾಗಿ ಮನವಿ ಮಾಡುವದಾಗಿ ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಸುರೇಶ ನಂದೆಣ್ಣವರ, ಸೋಮಣ್ಣ ಬೆಟಗೇರಿ, ಪದ್ಮರಾಜ ಪಾಟೀಲ, ಶರಣು ಗೋಡಿ, ಮುದಕಣ್ಣ ಗದ್ದಿ ಮುಂತಾದವರು ಹಾಜರಿದ್ದರು.

> ಈ ಘಟನೆಯನ್ನು ತಿಳಿಗೊಳಿಸುವ ಕಾರ್ಯ ಮಾಡಬೇಕಾಗಿದ್ದ ಶಾಸಕರು ಇಂತಹ ಸಣ್ಣ ಘಟನೆಯನ್ನು ಬೆಂಬಲಿಸುವ ಮೂಲಕ ಜನರಿಗೆ ತಪ್ಪು ಸಂದೇಶ ನೀಡಿದಂತಾಗಿದೆ. ಹೋರಾಟಕ್ಕೆ ಬೆಂಬಲ ನೀಡುವದು ತಪ್ಪು ಎನ್ನುವದಿಲ್ಲ, ಆದರೆ ಇಂತಹ ಘಟನೆ ಆದ ಸಂದರ್ಭದಲ್ಲಿ ಗಲಾಟೆ ಮಾಡಿದ ಎರಡೂ ಸಮಾಜದವರನ್ನು, ಅಧಿಕಾರಿಗಳನ್ನು ಕರೆಸಿ ರಾಜಿ ಮಾಡಿ ಕಳಿಸಬೇಕಿತ್ತು. ಅದನ್ನು ಬಿಟ್ಟು ಬೆಂಬಲ ಕೊಡಲು ಮುಂದಾಗಿರುವದು ದುರದೃಷ್ಟಕರ. ಶಾಸಕರಿಗೆ ಕ್ಷೇತ್ರದಲ್ಲಿ ಮಾಡಲು ಸಾಕಷ್ಟು ಕಾರ್ಯಗಳಿವೆ, ಅಭಿವೃದ್ಧಿ ಕಾರ್ಯಗಳತ್ತ ಅವರು ಗಮನ ಹರಿಸುವದು ಸೂಕ್ತ ಎಂದು ಚನ್ನಪ್ಪ ಜಗಲಿ ಹೇಳಿದರು.

## ಏಕೀಕರಣದ ರೂವಾರಿ ದೊಡ್ಡಮೇಟಿ ಅಂದಾನಪ್ಪ ಸ್ಮಾರಕ ನಿರ್ಮಾಣ ನೆನೆಗುದಿಗೆ

# ಅನಾಥ ಸ್ಥಿತಿಯಲ್ಲಿ ದೊಡ್ಡಮೇಟಿ ಸಮಾಧಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಅಂದಿನ ಮೈಸೂರು ರಾಜ್ಯ ಕರ್ನಾಟಕವೆಂದು ನಾಮಕರಣಗೊಂಡು 50 ವಸಂತಗಳು ಗತಿಸಿದವು. ಕರ್ನಾಟಕ ರಾಜ್ಯದ ಏಕೀಕರಣಕ್ಕಾಗಿ ದುಡಿದ ಮುಂಚೂಣಿ ನಾಯಕರೆಂದರೆ ಜಕ್ಕಲಿಯ ಅಂದಾನಪ್ಪ ದೊಡ್ಡಮೇಟಿಯವರು. ಸ್ವಾತಂತ್ರ್ಯ ಹೋರಾಟಗಾರರೂ ಆಗಿದ್ದ ಅವರು ಗಾಂಧೀಜಿ, ನೆಹರೂವರನ್ನು ತಮ್ಮ ಗ್ರಾಮ ಜಕ್ಕಲಿಗೆ ಕರೆತಂದ


> ದೊಡ್ಡಮೇಟಿಯವರ ಸ್ಮಾರಕ ನಿರ್ಮಾಣಕ್ಕಾಗಿ ಈಗಾಗಲೇ 1.23 ಎಕರೆ ಜಮೀನನ್ನು ದಾನದ ರೂಪವಾಗಿ ರಾಜ್ಯಪಾಲರ ಹೆಸರಿಗೆ ನೋಂದಣಿ ಮಾಡಲಾಗಿದೆ. ಅಂದಾಜು ರೂ.9.95 ಕೋಟಿಗಳ ಕ್ರಿಯಾ ಯೋಜನೆ ಸಿದ್ಧವಾಗಿದೆ. ಸರಕಾರದಿಂದ ಅನುದಾನ ಬಂದ ತಕ್ಷಣ ಕಾಮಗಾರಿ ಪ್ರಾರಂಭಿಸಲಾಗುತ್ತದೆ.
>
> – ವೀರಯ್ಯಸ್ವಾಮಿ.
> ಜಿಲ್ಲಾ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ.



ಧೀಮಂತ ನಾಯಕರು. ಅವರ ಸಮಾಧಿ ಅವರ ಜಮೀನಿನಲ್ಲಿಯೇ ಇದ್ದು, ಅನಾಥ ಸ್ಥಿತಿಯಲ್ಲಿರುವುದನ್ನು ನೋಡಲು ಕನ್ನಡಿಗರಿಗೆ ತೀವ್ರ ಕಸಿವಿಸಿಯಾಗುತ್ತಿದೆ.


ದೊಡ್ಡಮೇಟಿಯವರ ಸಮಾಧಿ ಸ್ಥಳವನ್ನು ಸ್ಮಾರಕವನ್ನಾಗಿಸಲು ಘೋಷಿಸಿ ಒಂದು ವರ್ಷವೇ ಕಳೆಯಿತು. ಅಲ್ಲಿಂದ ಇಲ್ಲಿಯವರೆಗೆ ಸಭೆಗಳಾದವೇ ಹೊರತು ಕಾರ್ಯ ಪ್ರಗತಿ ಕಾಣದಿರುವುದು ಅಧಿಕಾರಿಗಳ, ಜನಪ್ರತಿನಿಧಿಗಳ ಇಚ್ಛಾ ಶಕ್ತಿಯ ಕೊರತೆಯನ್ನು ಎತ್ತಿ ತೋರಿಸುತ್ತದೆ. ಇದೇ ದಕ್ಷಿಣ ಕರ್ನಾಟಕದಲ್ಲಾಗಿದ್ದರೆ ಇಷ್ಟೊತ್ತಿಗಾಗಲೇ ಸ್ಮಾರಕ ನಿರ್ಮಾಣಗೊಂಡು ಸಾರ್ವಜನಿಕರ ದರ್ಶನಕ್ಕೆ ಸಿದ್ಧವಾಗಿರುತ್ತಿತ್ತು ಎಂಬುದು ಉತ್ತರ ಕರ್ನಾಟಕದ ಕನ್ನಡಿಗರ ಅನಿಸಿಕೆ.

ದೊಡ್ಡಮೇಟಿ ಅಂದಾನಪ್ಪ ಬಳ್ಳಾರಿ ಜಿಲ್ಲೆ ಕರ್ನಾಟಕದಲ್ಲಿ ಉಳಿಯುವಂತೆ ಮಾಡಿದ ಕನ್ನಡದ ಪುತ್ರ. ಕಾಯಾ ವಾಚಾ ಮನಸಾ, ತನು, ಮನ, ಧನದಿಂದ ಕರ್ನಾಟಕ ಏಕೀಕರಣಕ್ಕೆ ದುಡಿದು ಮಡಿದ ಕನ್ನಡಾಂಬೆಯ ವರಪುತ್ರ. ಅಂದಾನಪ್ಪನವರು ಗತಿಸಿ 52 ವರ್ಷಗಳು ಕಳೆದರೂ ಅವರಿಗೊಂದು ಸ್ಮಾರಕ ನಿರ್ಮಾಣ ಮಾಡದಂತಹ ಹೀನಾಯ ಸ್ಥಿತಿಯಲ್ಲಿ ನಾವಿದ್ದೇವೆ ಎಂಬುದು ನಾಚಿಕೆಗೇಡಿನ ವಿಷಯ.




ಈ ಭಾಗದ ಮಠಾಧೀಶರು, ಕನ್ನಡಪರ ಹೋರಾಟಗಾರರು, ಸಾಹಿತಿಗಳು, ಬರಹಗಾರರು ಸೇರಿದಂತೆ ಕನ್ನಡಾಭಿಮಾನಿಗಳು ಸಮಾಧಿಯನ್ನು ಸ್ಮಾರಕವನ್ನಾಗಿಸುವಂತೆ ಸಾಕಷ್ಟು ಹೋರಾಟ, ಜಾಥಾ, ಪಾದಯಾತ್ರೆ ಸೇರಿದಂತೆ ಹತ್ತು ಹಲವು ರೀತಿಯಲ್ಲಿ ಒತ್ತಾಯ ಮಾಡುತ್ತ ಬಂದಿದ್ದರು. ಅದರ ಫಲವಾಗಿ ಕಳೆದ ವರ್ಷ ರಾಜ್ಯ ಸರ್ಕಾರವು ದಿ. ಅಂದಾನಪ್ಪನವರ ಸಮಾಧಿಯನ್ನು ಸ್ಮಾರಕವನ್ನಾಗಿಸಿ ಅಭಿವೃದ್ಧಿಪಡಿಸುವುದಾಗಿ ಘೋಷಿಸಿದ್ದು ಈ ಭಾಗದ ಜನರ ಸಂತಸಕ್ಕೆ ಕಾರಣವಾಗಿತ್ತು. ಆದರೆ, ಘೋಷಣೆಯಾಗಿ ಒಂದು ವರ್ಷ ಕಳೆದರೂ ಕಾಮಗಾರಿ ಪ್ರಾರಂಭವಾಗದಿರುವುದು ನಿರಾಸೆ ಮೂಡಿಸಿದೆ.

> ಅಂದಾನಪ್ಪನವರ ಸ್ಮಾರಕ ನಿರ್ಮಾಣಕ್ಕೆ ಬೇಕಾದ ಅಗತ್ಯ ದಾಖಲಾತಿಗಳನ್ನು ರಾಜ್ಯ ಸರ್ಕಾರಕ್ಕೆ ಸಲ್ಲಿಸಲಾಗಿದೆ. ಈಗಾಗಲೇ ಸ್ಮಾರಕ ಭವನ ನಿರ್ಮಾಣದ ರೂಪರೇಷೆಗಳು ಸಿದ್ಧವಾಗಿವೆ. ಮುಖ್ಯಮಂತ್ರಿಗಳ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಿಗೆ ಭೇಟಿಯಾಗಿ ಆದಷ್ಟು ಬೇಗ ಅನುದಾನ ಬಿಡುಗಡೆ ಮಾಡಿಸಲಾಗುತ್ತದೆ.
>
> – ಜಿ.ಎಸ್. ಪಾಟೀಲ.
> ಶಾಸಕರು, ರೋಣ.



> ಅಂದಾನಪ್ಪನವರು ಜೀವನುದ್ದಕ್ಕೂ ಕರ್ನಾಟಕದ ಅಭಿವೃದ್ಧಿಯನ್ನೇ ಉಸಿರಾಗಿಸಿಕೊಂಡಿದ್ದರು. ಅವರ ಸ್ಮಾರಕ ಭವನ ನಿರ್ಮಾಣಕ್ಕೆ ಗ್ರಹಣ ಹಿಡಿದಿರುವುದು ನಿರಾಸೆಯಾಗಿದೆ. ಈಗಲಾದರೂ, ರಾಜ್ಯ ಸರ್ಕಾರ ಸ್ಮಾರಕ ಭವನದ ನಿರ್ಮಾಣಕ್ಕೆ ಅನುದಾನ ಮಂಜೂರು ಮಾಡಲು ಮುಂದಾಗಬೇಕು ಎನ್ನುತ್ತಾರೆ ಮಾಜಿ ಯೋಧ ಎಂ.ಎಸ್. ಮಲ್ಲನಗೌಡರ.

# ಡೆಪ್ಯೂಟಿ ಚನ್ನಬಸಪ್ಪನವರ ಸೇವೆ ಅನನ್ಯ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಕನ್ನಡ ಭಾಷೆ, ಶಿಕ್ಷಣ, ಸಾಹಿತ್ಯ, ಸಂಸ್ಕೃತಿ ಉಳಿಸಿ ಬೆಳೆಸುವಲ್ಲಿ ಡೆಪ್ಯೂಟಿ ಚನ್ನಬಸಪ್ಪನವರ ಸೇವೆ ಅನನ್ಯವಾದುದು ಎಂದು ಧಾರವಾಡದ ಡಾ.ಬಾಳಣ್ಣ ಶೀಗೀಹಳ್ಳಿ ಹೇಳಿದರು.

ಅವರು ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿಗಳ ಕಲಾಭವನದಲ್ಲಿ ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಹಾಗೂ ಹೋಬಳಿ ಘಟಕದಡಿ ಲಿಂ. ಗಂಗಮ್ಮಾ ಹಾಗೂ ಚನ್ನಬಸಪ್ಪ ಚವಡಿ ಸ್ಮರಣಾರ್ಥ ದತ್ತಿ ಉಪನ್ಯಾಸದಲ್ಲಿ ಡೆಪ್ಯೂಟಿ ಚನ್ನಬಸಪ್ಪನವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು.

ಚನ್ನಬಸಪ್ಪನವರು ಗಣಿತ ಶಿಕ್ಷಕರಾಗಿ, ಶ್ರೇಷ್ಠ ವಾಗ್ಮಿಗಳಾಗಿ, ಕವಿ ಶೇಕ್ಸಪಿಯರರನ್ನು



ಕನ್ನಡಕ್ಕೆ ಪರಿಚಯಿಸಿದ ಪ್ರಥಮ ಲೇಖಕರಾಗಿ, ಕರ್ನಾಟಕದ ಪ್ರಥಮ ಶಿಕ್ಷಣ ತರಬೇತಿ ಸಂಸ್ಥೆಯ ಮೊದಲ ಪ್ರಾಚಾರ್ಯರಾಗಿ ಸಲ್ಲಿಸಿದ ಸೇವೆ ಅಮೋಘವಾಗಿದ್ದು, ಅವರು ರಾಜ್ಯದ ವಿವಿಧೆಡೆ ಕನ್ನಡ ಪ್ರಾಥಮಿಕ ಶಾಲೆಗಳನ್ನು ಪ್ರಾರಂಭಿಸುವ ಆಂದೋಲನ ರೂಪಿಸಿ, ಬಡ ಮಕ್ಕಳ ಉಚಿತ ಪ್ರಸಾದ ನಿಲಯಗಳನ್ನು ತೆರೆಯುವ ಮೂಲಕ ಮಕ್ಕಳ ಬಾಳಿಗೆ ಬೆಳಕಾದವರು ಎಂದರು.

ಗದಗ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದ ಪಾಟೀಲ ಮಾತನಾಡಿ, ಕನ್ನಡ ಭಾಷಾ ಪುನಜ್ಜೀವನ ಮತ್ತು ಕನ್ನಡ ಶಾಲೆಗಳ ಸ್ಥಾಪನೆಗೆ ತಮ್ಮನ್ನೇ ಅರ್ಪಿಸಿಕೊಂಡಿದ್ದ ಡೆಪ್ಯೂಟಿ ಚನ್ನಬಸಪ್ಪನವರು ನಮಗೆಲ್ಲಾ ಸ್ಫೂರ್ತಿ. ಇಂತಹ ಮಹನೀಯರ ಸ್ಮರಣೆಯನ್ನು ಮಾಡಬೇಕು ಎಂದರು.

ಧಾರವಾಡದ ಮಲ್ಲಿಕಾರ್ಜುನ ಮಾಹಾಸ್ವಾಮೀಜಿ ಸಾನ್ನಿಧ್ಯ ವಹಿಸಿ ಮಾತನಾಡಿ, ಡಾ. ಎಸ್.ಸಿ. ಚವಡಿಯವರು ತಂದೆ–ತಾಯಿಗಳ ಸ್ಮರಣಾರ್ಥ ನಾಡಿನ ಹತ್ತು ಹಲವಾರು ಮಹನೀಯರ ಚರಿತ್ರೆಗಳನ್ನು ಉಣಬಡಿಸುತ್ತಿರುವುದು ಶ್ಲಾಘನೀಯ ಎಂದರು.

ನೀಲಗುಂದ ಗುದ್ನೇಶ್ವರಮ್ಮಠದ ಪ್ರಭುಲಿಂಗ ದೇವರು ಸಮ್ಮುಖ ವಹಿಸಿದ್ದರು. ಡಾ. ಶಿವಕುಮಾರ ಚವಡಿ, ಮಾಹಾದೇವಪ್ಪ ಬಟ್ಟೂರ, ಸುಮನ್ ಚವಡಿ, ಡಾ.ಎಸ್.ಸಿ. ಚವಡಿ, ಮೃತ್ಯುಂಜಯ ಹಿರೇಮಠ, ಎಸ್.ಎಂ. ಉಜ್ಜಣ್ಣವರ, ಮಂಜುನಾಥ ಮಟ್ಟಿ, ವರ್ಷಾ ಬಾರಕೇರ ಹಾಗೂ ಕಸಾಪ ಸರ್ವ ಸದಸ್ಯರು ಇದ್ದರು.

# ಕಟ್ಟಡ ನಿರ್ಮಾಣ ಕಾರ್ಮಿಕರಿಂದ ರಾಜ್ಯೋತ್ಸವ

■ ವಿಜಯಸಾಕ್ಷಿ ಸುದ್ದಿ, ಗದಗ

ಜೈಹೋ ಕರ್ನಾಟಕ ಪರಿವರ್ತನಾ ವೇದಿಕೆ, ಕಾರ್ಮಿಕ ಕಲ್ಯಾಣ ಸಂಸ್ಥೆ, ಕರ್ನಾಟಕ ಕಟ್ಟಡ ನಿರ್ಮಾಣ ಕಾರ್ಮಿಕರ ಒಕ್ಕೂಟ, ಅಮರಶಿಲ್ಪಿ ಜಕಣಾಚಾರಿ ಕಟ್ಟಡ ನಿರ್ಮಾಣ ಕೂಲಿ ಕಾರ್ಮಿಕರ ಸಂಘ, ಗದಗ ಜಿಲ್ಲೆಯ ಸಮಸ್ತ ಕಟ್ಟಡ ನಿರ್ಮಾಣ ಕಾರ್ಮಿಕರಿಂದ ಕನ್ನಡ ರಾಜ್ಯೋತ್ಸವದ ಧ್ವಜಾರೋಹಣ ಕಾರ್ಯಕ್ರಮ ಗದಗ ನಗರದ ಸಂಘದ ಕಾರ್ಯಾಲಯದಲ್ಲಿ ನೇರವೇರಿತು.

ಧ್ವಜಾರೋಹಣವನ್ನು ಗೌರವಾಧ್ಯಕ್ಷ ಭೀಮಪ್ಪ ಪೂಜಾರ ನೇರವೇರಿಸಿದರು.



ಅಧ್ಯಕ್ಷತೆಯನ್ನು ರಾಜ್ಯಾಧ್ಯಕ್ಷ ಮಹ್ಮದ ಇರ್ಫಾನ್ ಡಂಬಳ ವಹಿಸಿದ್ದರು. ಕಾರ್ಯಕ್ರಮದಲ್ಲಿ ಎಸ್.ಪಿ. ಕರಿಸೋಮನಗೌಡ್ರ, ಜಿಲಾನಿ ಗುಳಗುಂದಿ, ರಮೇಶ ವಾಲ್ಮೀಕಿ, ಶಂಕರ ಗುರುಬಸಣ್ಣವರ, ಮಹಮ್ಮದಲಿ ರಾಮದುರ್ಗ, ಖಾದರ ಬಳ್ಳಾರಿ, ಶೌಕತ ಯರಂಡಿವಾಲೆ, ಏಕನಾಥ, ಮಂಜು, ಜುಬೇರ ಧಾರವಾಡ, ವಸಂತ ದೇವದುರ್ಗ, ನಾಶೀರ ಚಿಕೇನಕೊಪ್ಪ, ಮಮ್ಮದ ಯುಸೂಪ ಬೇಪಾರಿ, ಕರಿಯಪ್ಪ ವಿವಿಧ ಸಂಘಟನೆಯ ಕಾರ್ಮಿಕರು, ವ್ಯಾಪಾರಸ್ಥರು ಬಾಗವಹಿಸಿದ್ದರು.

# ಕನ್ನಡವನ್ನು ಉಳಿಸಿ, ಬೆಳಿಸಿ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ನಮ್ಮ ಮಾತೃಬಾಷೆ ಕನ್ನಡವಾಗಿದ್ದು, ಅದನ್ನು ಎಂದಿಗೂ ಮರೆಯಬಾರದು ಎಂದು ಕಸಾಪ ಅಧ್ಯಕ್ಷ ಪಿ.ಬಿ. ಹೂಗಾರ ಹೇಳಿದರು.

ಅವರು ಸಮೀಪದ ಸೊರಟೂರ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಹೆಣ್ಣು ಮಕ್ಕಳ ಶಾಲೆಯಲ್ಲಿ ಕನ್ನಡ ರಾಜ್ಯೋತ್ಸವ ಅಂಗವಾಗಿ ಕಸಾಪ ವತಿಯಿಂದ ಭುವನೇಶ್ವರಿ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿ, ಕರ್ನಾಟಕ ಏಕೀಕರಣಕ್ಕೆ ಹಲವಾರು ಮಹನೀಚುರು ಕೊಡುಗೆ ನೀಡಿದ್ದಾರೆ.



ಅವರೆಲ್ಲರ ಶ್ರಮದಿಂದಲೇ ಇಂದು ಕರ್ನಾಟಕದ ನಾಡು–ನುಡಿ, ನೆಲ–ಜಲ, ಭಾಷೆ, ಸಂಸ್ಕೃತಿ ಉಳಿದಿದ್ದು ಅದನ್ನು ಪ್ರತಿಯೊಬ್ಬರೂ ಉಳಿಸಿ ಬೆಳಿಸಿಕೊಂಡು ಹೋಗಬೇಕಾಗಿದೆ. ಇಂದು ಆಂಗ್ಲ ಭಾಷೆಗೆ ಮಾರು ಹೋಗಿ ಕನ್ನಡ ಭಾಷೆಯನ್ನು ಮರೆಯುತ್ತಿದ್ದಾರೆ. ಮಕ್ಕಳು ಕನ್ನಡ ಭಾಷೆಗೆ ಹೆಚ್ಚು ಗಮನ ನೀಡಿ ಅಭ್ಯಾಸ ಮಾಡಿದಲ್ಲಿ ಸಾಕಷ್ಟು ಅವಕಾಶಗಳಿವೆ ಎಂದರು.

ಶಾಲಾ ಪ್ರಧಾನ ಗುರು ವಿ.ಎಂ. ವೆರ್ಣೇಕರ, ಎಸ್.ವಿ. ಬಂಡಿಹಾಳ, ಜಿ.ಕೆ. ಅರುಂದತಿ, ಕೆ. ಉಮ್ಮೆಸಲ್ಮಾ, ಸಂಜೋತಾ ಹುಯಿಲಗೋಳ, ವಾಯ್.ಪಿ. ಅಡ್ನೂರ, ಎ.ಸಿ. ಚನ್ನವೀರಶೇಟ್ರ, ಎಸ್‌ಡಿಎಂಸಿ ಅಧ್ಯಕ್ಷ ಸುಮಿತ್ರಾ ಹರಿಜನ, ಪ್ರಕಾಶ ಹಿರೇಮಠ, ಗುಂಡೇಶ ಕುಸ್ಲಾಪೂರ, ಅಂದಾನಪ್ಪ ದಿವಟರ ಮುಂತಾದವರಿದ್ದರು.

# ಮುಡಾ ಹಗರಣ: ವಿಚಾರಣೆಗೆ ಹಾಜರಾಗುವಂತೆ ಸಿಎಂಗೆ "ಲೋಕಾ" ನೋಟಿಸ್!

■ ವಿಜಯಸಾಕ್ಷಿ ಸುದ್ದಿ, ಮೈಸೂರು

ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ವಿಚಾರಣೆಗೆ ಹಾಜರಾಗುವಂತೆ ಸಿಎಂ ಸಿದ್ದರಾಮಯ್ಯಗೆ ಲೋಕಾಯುಕ್ತ ಪೊಲೀಸರು ನೋಟಿಸ್ ಜಾರಿ ಮಾಡಿದ್ದಾರೆ.

ಸಿದ್ದರಾಮಯ್ಯನವರ 40 ವರ್ಷದ ಇತಿಹಾಸದಲ್ಲಿ ಇಲ್ಲಿಯವರೆಗೆ ತನ್ನ ವೈಯಕ್ತಿಕ ವಿಚಾರಕ್ಕೆ ಸಂಬಂಧಿಸಿದಂತೆ ಪೊಲೀಸ್ ಆಗಲಿ ಇತರ ವಿಚಾರಣಾ ಸಂಸ್ಥೆಯಿಂದ ನೋಟಿಸ್ ಸ್ವೀಕರಿಸಿರಲಿಲ್ಲ. ಆದರೆ ಈಗ ಮುಡಾ ಅಕ್ರಮಕ್ಕೆ ಸಂಬಂಧಿಸಿದಂತೆ ನೋಟಿಸ್ ಸ್ವೀಕರಿಸಿದ್ದಾರೆ.

ನವೆಂಬರ್ 6 ಬುಧವಾರ 10:30ಕ್ಕೆ ವಿಚಾರಣೆಗೆ ಹಾಜರಾಗುವಂತೆ ನೋಟಿಸ್ ಜಾರಿ ಮಾಡಲಾಗಿದೆ.

# ನದಿಯಲ್ಲಿ ಸ್ನಾನ ಮಾಡಲು ಹೋಗಿ ಅವಘಡ: ನೀರು ಪಾಲಾದ ಯುವಕ!

■ ವಿಜಯಸಾಕ್ಷಿ ಸುದ್ದಿ, ಯಾದಗಿರಿ

ಜಿಲ್ಲೆಯ ಸುರಪುರ ತಾಲೂಕಿನ ತಿಂಥಣಿ ಗ್ರಾಮದ ಬಳಿಯ ಕೃಷ್ಣಾ ನದಿಯಲ್ಲಿ ನದಿಯಲ್ಲಿ ಸ್ನಾನ ಮಾಡುವಾಗ ಕಾಲು ಜಾರಿ ಬಿದ್ದು ಯುವಕ ಸಾವನ್ನಪ್ಪಿರುವ ಘಟನೆ ಜರುಗಿದೆ. 26 ವರ್ಷದ ಮಂಗಳೇಶ ಬಡಿಗೇರ್ ಮೃತ ಯುವಕ. ಜಿಲ್ಲೆಯ ತಿಂಥಣಿ ಗ್ರಾಮಕ್ಕೆ ಸಂಬಂಧಿಕರ ಜವಳ ಕಾರ್ಯಕ್ರಮಕ್ಕೆ ಮಂಗಳೇಶ ಬಂದಿದ್ದ. ತಿಂಥಣಿ ಮೌನೇಶ್ವರ ದೇವಸ್ಥಾನದಲ್ಲಿ ಕಾರ್ಯಕ್ರಮ ನಡೆಯುತ್ತಿತ್ತು. ಈ ವೇಳೆ ಕೃಷ್ಣಾ ನದಿಯಲ್ಲಿ ಸ್ನಾನ ಮಾಡಲು ತೆರಳಿದ್ದ. ಸ್ನಾನ ಮಾಡುವಾಗ ಕಾಲು ಜಾರಿದ್ದು, ನೀರು ಪಾಲಾಗಿದ್ದಾನೆ. ಸ್ಥಳಕ್ಕೆ ಅಗ್ನಿಶಾಮಕ ದಳ, ಪೊಲೀಸರು ಆಗಮಿಸಿದ್ದು, ಸ್ಥಳೀಯ ಅಂಬಿಗರ ಸಹಾಯದಿಂದ ಸತತ ಮೂರು ಗಂಟೆಗಳ ಶೋಧ ಕಾರ್ಯ ನಡೆಸಿ, ಮೃತ ದೇಹವನ್ನು ಹೊರತೆಗೆದಿದ್ದಾರೆ. ಶವವನ್ನು ಮರಣೋತ್ತರ ಪರೀಕ್ಷೆಗಾಗಿ ಸುರಪುರ ತಾಲೂಕು ಆಸ್ಪತ್ರೆಗೆ ರವಾನಿಸಲಾಗಿದೆ.

**ದೇವಸ್ಥಾನದ ಉದ್ಘಾಟನೆ, ಜನಜಾಗೃತಿ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು**

# ನಂಬಿಕೆಯಿಲ್ಲದ ಸಂಬಂಧ ತೃಪ್ತಿ ಕೊಡದು

■ವಿಜಯಸಾಕ್ಷಿ ಸುದ್ದಿ, ಹೊಳಲ್ಕೆರೆ

ಆಧುನಿಕ ಕಾಲದಲ್ಲಿ ಮಾನವೀಯ ಸಂಬಂಧಗಳು ಕಣ್ಮರೆಯಾಗುತ್ತಿವೆ. ಸ್ವಾರ್ಥವಿಲ್ಲದ ನಿಲುವು, ಕಷ್ಟಪಡದೇ ಸಿಗುವ ಹಣ, ನಂಬಿಕೆಯಿಲ್ಲದ ಸಂಬಂಧ ಎಂದೆಂದಿಗೂ ಜೀವನದಲ್ಲಿ ತೃಪ್ತಿಯನ್ನು ಕೊಡುವುದಿಲ್ಲವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಭಾನುವಾರ ತಾಲೂಕಿನ ಮದ್ದೇರು ಗ್ರಾಮದಲ್ಲಿ ಪುರಾತನ ಈಶ್ವರ ದೇವಸ್ಥಾನ ಮತ್ತು ಬಸವಣ್ಣ ದೇವಸ್ಥಾನದ ಉದ್ಘಾಟನೆ ಅಂಗವಾಗಿ ಜರುಗಿದ ಜನಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಭಾರತ ಧರ್ಮ ಭೂಮಿಯಲ್ಲಿ ಹಲವಾರು ಧರ್ಮಗಳು ಮತ್ತು ಸಂಪ್ರದಾಯಗಳು ಬೆಳೆದು ಬಂದಿವೆ. ಅವೆಲ್ಲ ಧರ್ಮಗಳ ಗುರಿ ಮಾನವ ಜೀವಾತ್ಮರನ್ನು ಉದ್ಧರಿಸುವ ಗುರಿ ಹೊಂದಿವೆ. ಮನುಷ್ಯ ಜೀವನದಲ್ಲಿ ಧರ್ಮ, ದೇವರು ಮತ್ತು ಗುರುವನ್ನು ಎಂದಿಗೂ ಮರೆಯಬಾರದು. ಬದುಕಿಗೆ ಭಗವಂತನ ಕೊಡುಗೆ ಅಪಾರವಾದುದು. ನಂಬಿ ನಡೆದ ಭಕ್ತನಿಗೆ ಕಲ್ಲು ಕೂಡಾ ದೇವರಾಗಿ



ಕಾಣುತ್ತದೆ. ನಂಬಿಗೆ ಇಲ್ಲದವರಿಗೆ ಸಾಕ್ಷಾತ್ ದೇವರು ಪ್ರತ್ಯಕ್ಷನಾದರೂ ದೇವರ ಮಹಿಮೆ ಅರಿಯಲಾರ. ಶ್ರೀ ಜಗದ್ಗುರು ರೇಣುಕಾಚಾರ್ಯರು ಬದುಕಿ ಬಾಳುವ ಜೀವಾತ್ಮರಿಗೆ ಜೀವನ ದರ್ಶನದ ಹತ್ತು ಅಮೂಲ್ಯವಾದ ಧರ್ಮ ಸೂತ್ರಗಳನ್ನು ಬೋಧಿಸಿದ್ದಾರೆ. ಅವರ ಆ ವಿಚಾರ ಧಾರೆಗಳು ಅಂದಿಗಷ್ಟೇ ಅಲ್ಲ ಇಂದಿಗೂ ಅನ್ವಯಿಸುತ್ತವೆ.

ಮನಸ್ಸನ್ನು ನಿಯಂತ್ರಿಸುವ ಸಾಮರ್ಥ್ಯವಿದ್ದರೆ ಬದುಕನ್ನು ಬದಲಾಯಿಸುವ ಸಾಮರ್ಥ್ಯ ನಮ್ಮಲ್ಲಿಯೇ ಇರುತ್ತದೆ. ಸಾಧನೆಯಿಂದ ಸಂತೋಷ ಸಿಗುತ್ತದೆ ಎಂದು ಹೇಳಲಾಗದು. ಆದರೆ ಸಂತೋಷವು ಸಾಧನೆಗೆ ದಾರಿಯಾಗುತ್ತದೆ ಎನ್ನುವುದು ಸತ್ಯ. ಮದ್ದೇರು ಗ್ರಾಮದ ಸಕಲ ಸದ್ಭಕ್ತರು ಪುರಾತನವಾದ ಈಶ್ವರ-ಬಸವಣ್ಣ ಜೋಡಿ ದೇವಸ್ಥಾನ ನಿರ್ಮಿಸಿ ಉದ್ಘಾಟಿಸುತ್ತಿರುವುದು ತಮಗೆ ಅಪಾರ ಸಂತೋಷವನ್ನು ತಂದಿದೆ ಎಂದರು.

ಬಿಳಕಿ ಹಿರೇಮಠದ ರಾಚೋಟೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಮನುಷ್ಯ ಜೀವನದಲ್ಲಿ ದೇವರು ಮತ್ತು ಮರಣ ಇದೆ ಎಂಬುದನ್ನು ಯಾರೂ ಮರೆಯಬಾರದು. ನಾವು ಮಾಡಿದ ಉಪಕಾರ, ಪರರು ಮಾಡಿದ ಅಪಕಾರ ಮರೆತು ಬಾಳುವುದು ಮನಸ್ಸಿನ ನೆಮ್ಮದಿಗೆ ಕಾರಣವಾಗುತ್ತದೆ ಎಂದರು.

ಮಳಲಿ ಸಂಸ್ಥಾನಮಠದ ಡಾ. ನಾಗಭೂಷಣ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ವೀರಶೈವ ಧರ್ಮ ಉದಾತ್ತವಾದ ಮೌಲ್ಯಗಳನ್ನು ಪ್ರತಿಪಾದಿಸಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರ ತತ್ವ-ಸಿದ್ಧಾಂತಗಳು ಜೀವನದ ಉನ್ನತಿಗೆ ಅಡಿಪಾಯವಾಗಿವೆ. ಸತ್ಯ ಶುದ್ಧ ಧರ್ಮ ಮಾರ್ಗದಲ್ಲಿ ನಡೆದು ಜೀವನದಲ್ಲಿ ಶಾಂತಿ ನೆಮ್ಮದಿ ಕಾಣಬೇಕೆಂದರು.

ಮಾಜಿ ಶಾಸಕ ರಮೇಶ್, ತಾಲೂಕ ಬಿಜೆಪಿ ಅಧ್ಯಕ್ಷ ಸಿದ್ದೇಶ್, ಮಾಜಿ ಜಿ.ಪಂ ಸದಸ್ಯ ಶಿವಕುಮಾರ, ಬಿಜೆಪಿ ಧುರೀಣ ಹೊಸದುರ್ಗದ ಲಿಂಗಮೂರ್ತಿ ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದ ಪಡೆದರು. ದೇವಸ್ಥಾನ ಸಮಿತಿ ಮುಖ್ಯಸ್ಥ ರಾಜಣ್ಣ ಇವರು ಪ್ರಾಸ್ತಾವಿಕ ಮಾತನಾಡಿ, ದೇವಸ್ಥಾನ ನಿರ್ಮಾಣದ ಹಿನ್ನೆಲೆ ಕುರಿತು ವಿವರಿಸಿದರು. ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲದ ಸಾಧಕರಿಂದ ವೇದಘೋಷ, ಸ್ವಾಮಿ ಇವರಿಂದ ಸ್ವಾಗತ, ವಿಠಲಾಪುರ ಗಂಗಾಧರ ಹಿರೇಮಠರಿಂದ ಪ್ರಾರ್ಥನೆ ಜರುಗಿತು. ಶ್ರೇಯಾ ಜಿ.ಎಂ. ಇವರಿಂದ ಭರತ ನಾಟ್ಯ ಜರುಗಿತು. ಶಿವಮೊಗ್ಗದ ಹೆಚ್.ಶಾಂತಾ ಆನಂದ ನಿರೂಪಿಸಿದರು.

> ಸಮಾರಂಭ ಉದ್ಘಾಟಿಸಿದ ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಧರ್ಮದ ದಿಕ್ಸೂಚಿ ಬಾಳಿಗೆ ಬಲವನ್ನು ತಂದು ಕೊಡುತ್ತದೆ. ಜೀವನದ ಆದರ್ಶ ಮೌಲ್ಯಗಳನ್ನು ಪರಿಪಾಲಿಸುವುದರಿಂದ ಸುಖ-ಶಾಂತಿ ಪ್ರಾಪ್ತಿಯಗುತ್ತದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ತೋರಿದ ದಾರಿ, ಕೊಟ್ಟ ಸಂದೇಶ ನಮ್ಮೆಲ್ಲರ ಬಾಳ ಬದುಕಿಗೆ ಶ್ರೇಯಸ್ಸನ್ನು ಉಂಟು ಮಾಡುತ್ತದೆ ಎಂದರು.

# ಪ್ರತಿಯೊಂದು ಹಬ್ಬಕ್ಕೂ ಧಾರ್ಮಿಕ ಹಿನ್ನೆಲೆಯಿದೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಹಾವಳಿ ಆಂಜನೇಯ ದೇವಸ್ಥಾನದ ರಥೋತ್ಸವವನ್ನು ಸಂಪ್ರದಾಯದಂತೆ ಸಡಗರ, ಸಂಭ್ರಮ ಮತ್ತು ಶ್ರದ್ಧಾ ಭಕ್ತಿಯಿಂದ ಸಾವಿರಾರು ಭಕ್ತರ ಸಮ್ಮುಖದಲ್ಲಿ ನೆರವೇರಿಸಲಾಯಿತು.

ಹೂವಿನಶಿಗ್ಲಿ ವಿರಕ್ತಮಠದ ಚನ್ನವೀರ ಮಹಾಸ್ವಾಮಿಗಳು ರಥೋತ್ಸವವಕ್ಕೆ ಚಾಲನೆ ನೀಡಿ ಆಶೀರ್ವಚನ ನೀಡಿ, ಅಜ್ಞಾನ, ಅಂಧಕಾರ ಕಳೆದು ಜ್ಞಾನದ ಜ್ಯೋತಿ ಬೆಳಗಿಸುವುದು ದೀಪಾವಳಿ ಹಬ್ಬದ ವೈಶಿಷ್ಟ್ಯವಾಗಿದೆ. ಧರ್ಮ, ಸಂಸ್ಕೃತಿ, ಜ್ಞಾನ ಮತ್ತು ಆಧ್ಯಾತ್ಮದ ಸಂಕೇತವಾಗಿ, ದೀಪ ಬೆಳಗಿದಂತೆ ಎಲ್ಲರ ಜೀವನದಲ್ಲಿ ಬೆಳಕು ಪ್ರಜ್ವಲಿಸಬೇಕು, ಸಮಾಜದಲ್ಲಿ ಮತ್ತೊಬ್ಬರ ಬಾಳಿಗೆ ಬೆಳಕಾಗುವ ಕೆಲಸ ಮಾಡಬೇಕೇ ಹೊರತು ಕತ್ತಲೆಗೆ ತಳ್ಳುವ ಕಾರ್ಯವನ್ನು ಮಾಡಬಾರದು. ಜಾತ್ರೆ, ಹಬ್ಬ-ಹರಿದಿನಗಳು ನಮ್ಮ ಸಂಸ್ಕೃತಿಯ ಪ್ರತೀಕವಾಗಿದ್ದು, ಪ್ರತಿಯೊಂದು ಹಬ್ಬಕ್ಕೂ ಧಾರ್ಮಿಕ ಹಿನ್ನೆಲೆಯಿದೆ. ಇಲ್ಲಿನ ಹಾವಳಿ ಹನುಮಂತ ದೇವರು ವಿಶೇಷ ಶಕ್ತಿ ಹೊಂದಿದ ಜಾಗೃತ ದೇವರಾಗಿದ್ದು, ಇಲ್ಲಿನ ಭಕ್ತರು ಹಮ್ಮಿಕೊಳ್ಳುತ್ತಿರುವ ಕಾರ್ಯಗಳು ಶ್ಲಾಘನೀಯ ಎಂದು ನುಡಿದರು.

ಶಾಸಕ ಡಾ. ಚಂದ್ರು ಲಮಾಣಿ ರಥಕ್ಕೆ ಪೂಜೆ ಸಲ್ಲಿಸಿದರು. ಈಶ್ವರಪ್ಪ ಕುಂಬಾರ, ನೀಲಪ್ಪ ಕರ್ಜೆಕಣ್ಣವರ, ನಾಗರಾಜ ಚಿಂಚಲಿ, ಮಹೇಶ ಹೊಗೆಸೊಪ್ಪಿನ, ಸುನೀಲ ಮಹಾಂತಶೆಟ್ಟರ, ವಿಜಯಕುಮಾರ ಹತ್ತಿಕಾಳ, ನವೀನ ಬೆಳ್ಳಟ್ಟಿ, ಮಾಂತೇಶ ಅಣ್ಣಿಗೇರಿ, ಅನಿಲ ಮುಳಗುಂದ, ಹಿಂದೂ ಮಹಾಸಭಾ ಗಣಪತಿ ಅಧ್ಯಕ್ಷ ಫಕ್ಕೀರೇಶ ಅಣ್ಣಿಗೇರಿ, ಮಾಂತೇಶ ಗೋಡಿ, ನವೀನ ಕುಂಬಾರ, ಮಂಜುನಾಥ ಕೊಡಳ್ಳಿ, ಜಗದೀಶ ಕುಂಬಾರ, ಬಸವರಾಜ ಗೋಡಿ, ನಿಂಗಪ್ಪ ಬನ್ನಿ, ಶಕ್ತಿ ಕತ್ತಿ, ಈರಣ್ಣ ಪೂಜಾರ, ಬಸವರಾಜ ಚಕ್ರಸಾಲಿ, ಅರ್ಚಕ ಮುರಘೇಂದ್ರಸ್ವಾಮಿ ಹಿರೇಮಠ, ಭರಮಪ್ಪ ಅಣ್ಣಿಗೇರಿ, ಹಿಂದೂ ಮಹಾಸಭಾ ಗಣಪತಿ ಸೇವಾ ಮಂಡಳಿ, ಹಾವಳಿ ಆಂಜನೇಯ ಭಜನಾ ಮಂಡಳಿ, ಯುವಕ ಮಂಡಳಿ ಸದಸ್ಯರು ಸೇರಿ ಸಾರ್ವಜನಿಕರು ಪಾಲ್ಗೊಂಡಿದ್ದರು.

**ಕಿತ್ತೂರ ಚನ್ನಮ್ಮ ಜಯಂತಿ ಕಾರ್ಯಕ್ರಮದಲ್ಲಿ ವಿಜಯಕುಮಾರ ಗಡ್ಡಿ**

# ಚನ್ನಮ್ಮಳ ಧೈರ್ಯ ಸರ್ವ ಕಾಲಕ್ಕೂ ಮಾದರಿ

■ವಿಜಯಸಾಕ್ಷಿ ಸುದ್ದಿ, ಗದಗ

ದೇಶದ ಸ್ವಾತಂತ್ರ್ಯ ಹೋರಾಟಕ್ಕೆ ಕಿಚ್ಚು ಹೊತ್ತಿಸಿದ ಕಿತ್ತೂರು ಚನ್ನಮ್ಮಳ ಧೈರ್ಯ, ಸಾಹಸ ಸರ್ವ ಕಾಲಕ್ಕೂ ಮಾದರಿಯಾಗಿದೆ ಎಂದು ಪಂಚಮಸಾಲಿ ಸಮಾಜ ಮುಖಂಡ, ಉದ್ದಿಮೆದಾರ ವಿಜಯಕುಮಾರ ಗಡ್ಡಿ ಅಭಿಪ್ರಾಯಪಟ್ಟರು.

ಅವರು ಭಾನುವಾರ ಕೇಶವ ಪಾರ್ಕ್‌ನ ಅಷ್ಟಭುಜ ಈಶ್ವರ ದೇವಸ್ಥಾನದ ಆವರಣದಲ್ಲಿ ಕೇಶವ ಪಾರ್ಕ್ ಬಡಾವಣೆ, ಪುಟ್ಟರಾಜ ನಗರ ಭಾಗ 1, 2ನೇ ಹಂತದ ಬಡಾವಣೆಯ ಸರ್ವ ಸಮುದಾಯದ ವತಿಯಿಂದ ಆಯೋಜಿಸಲಾಗಿದ್ದ ವೀರರಾಣಿ ಕಿತ್ತೂರ ಚನ್ನಮ್ಮಳ 246ನೇ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಕಿತ್ತೂರ ಚನ್ನಮ್ಮ ತೆ-ೋರಿದ ಧೈರ್ಯ, ಸಾಹಸ ನಾಡಿನ ಅಭಿಮಾನವಾಗಿದ್ದು, ನಮ್ಮೆಲ್ಲರ ಮನ ಮನೆಗಳಲ್ಲಿ



ಹಾಸು ಹೊಕ್ಕಾಗಬೇಕು. ಅವರು ತೋರಿದ ದಿಟ್ಟತನದ ಹೋರಾಟ ನಮ್ಮೆಲ್ಲರಿಗೂ ಮಾದರಿಯಾಗಬೇಕು. ಇಂತವರ ದಿನಾಚರಣೆ ಆಚರಿಸುವುದು ಪ್ರತಿಯೊಬ್ಬ ಕನ್ನಡಿಗನಿಗೆ ಹೆಮ್ಮೆಯ ಸಂಗತಿಯಾಗಿದೆ ಎಂದರು.

ಸಮಾರಂಭದ ಅಧ್ಯಕ್ಷತೆಯನ್ನು ಎಸ್.ಆರ್. ಪಾಟೀಲ ವಹಿಸಿದ್ದರು. ಈ ಸಂದರ್ಭದಲ್ಲಿ ಉದ್ದಿಮೆದಾರ ಅಶೋಕ ಸಂಕಣ್ಣವರ ಮುಂತಾದವರು ಚನ್ನಮ್ಮಾಜಿಯ ಕುರಿತು ಮಾತನಾಡಿದರು. ಸಿದ್ಧಗಂಗಾಶ್ರೀ ಕ್ಷೇಮಾಭಿವೃದ್ಧಿ ಸಂಘದ ಉಪಾಧ್ಯಕ್ಷ ಬಿ.ಎಸ್. ಹಿರೇಮಠ, ಪಂಚಮಸಾಲಿ ಯುವ ಘಟಕದ ಅಯ್ಯಪ್ಪ ಅಂಗಡಿ, ಕೊಪ್ಪಳ ಸರ್ಕಾರಿ ಡಿಪ್ಲೋಮಾ ಕಾಲೇಜಿನ ಎಚ್‌ಓಡಿ ಅನುಪಮಾ ಹೊಸಮನಿ ಮುಂತಾದವರು ವೇದಿಕೆಯಲ್ಲಿದ್ದರು. ಬಡಾವಣೆಯ ಗುರು-ಹಿರಿಯರು, ತಾಯಂದಿರು ಭಾಗವಹಿಸಿದ್ದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಸಿವಿಲ್ ಗುತ್ತಿಗೆದಾರರ ಸಂಘದ ಅಧ್ಯಕ್ಷರಾಗಿ ಆಯ್ಕೆಯಾದ ಸಿದ್ದು ಪಾಟೀಲ, ನಿವೃತ್ತ ಸೈನಿಕ ಎಸ್.ಬಿ. ಮೇಟಿ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಶರಣಪ್ಪ ಪಲ್ಲೇದ, ಉಮೇಶ ಮುಳ್ಳಾಳ, ಪ್ರಭು ಬಳ್ಳಾರಿ, ಅಶೋಕ ಪಾಟೀಲ, ಪ್ರಕಾಶ ಹೊಸೂರ, ರಾಜೇಂದ್ರ ನರೇಗಲ್, ಪ್ರಕಾಶ ಹಡಗಲಿ, ರಾಜೇಂದ್ರ ನರೇಗಲ್ಲ, ಎಸ್.ಎನ್. ಮಾಳೆಕೊಪ್ಪ, ಕೆ.ಎಸ್. ಮೊಕಾಶಿ, ಈಶ್ವರಗೌಡ ಹುಡೇದ, ಮಲ್ಲು ಪಾಟೀಲ, ಜಿ.ಬಿ. ನಿಡಗುಂದಿ, ಸಿ.ಬಿ. ಬಳ್ಳಾರಿ, ಸೋಮು ಪವಾಡಶೆಟ್ಟರ, ನಾಗರಾಜ ಶಿರೂರ, ಬಸಯ್ಯ ರುದ್ರಾಪೂರಮಠ ಹಾಗೂ ಬಡಾವಣೆಯ ನೂರಾರು ಮಹಿಳೆಯರು ಭಾಗವಹಿಸಿದ್ದರು.

> ಪುಟ್ಟರಾಜ ನಗರ 2ನೇ ಹಂತದ ಅಧ್ಯಕ್ಷ ಶಿವಕುಮಾರ ಕುಷ್ಟಗಿ ಮಾತನಾಡಿ, ಚನ್ನಮ್ಮಳ ಜಯಂತಿಯನ್ನು ಸರ್ವ ಸಮುದಾಯದವರು ಕೂಡಿಕೊಂಡು ಮಾಡುತ್ತಿರುವುದು ಒಳ್ಳೆಯ ಬೆಳವಣಿಗೆ. ಇಂತಹ ಆಚರಣೆಗಳು ಸಮ ಸಮಾಜ ಕಟ್ಟುವಲ್ಲಿ ಕ್ರಾಂತಿಕಾರಕ, ದಿಟ್ಟ ಹೆಜ್ಜೆಯನ್ನು ಇಡಲು ಸಹಕಾರಿಯಾಗುತ್ತದೆ ಎಂದರು.

# ದೀಪಾವಳಿ ಜ್ಞಾನದ ಜ್ಯೋತಿ ಬೆಳಗುವ ಹಬ್ಬ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಳೆರಾಯ ಸ್ವಲ್ಪ ಬಿಡುವು ನೀಡಿದ ಹಿನ್ನೆಲೆಚುಲ್ಲಿ ದೀಪಾವಳಿ ಹಬ್ಬದ ನಿಮಿತ್ತ ಬಲಿಪಾಡ್ಯಮಿ ಹಬ್ಬವನ್ನು ಪಟ್ಟಣ ಸೇರಿ ತಾಲೂಕಿನಾದ್ಯಂತ ಸಡಗರ ಸಂಭ್ರಮದಿಂದ ಆಚರಿಸಲಾಯಿತು. ಹೊಸ ಉಡುಗೆತೊಟ್ಟು, ಪಟಾಕಿ ಸಿಡಿಸಿ ಮನೆ, ಅಂಗಡಿಗಳಲ್ಲಿ ಲಕ್ಷ್ಮೀ ಪೂಜೆಯನ್ನು ನೆರವೇರಿಸಿದರು.

ಸಂಪ್ರದಾಯದಂತೆ ಮುಕ್ತಿಮಂದಿರ ಧರ್ಮಕ್ಷೇತ್ರದ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು ಪಟ್ಟಣದ ವ್ಯಾಪಾರಸ್ಥರ ಅಂಗಡಿ ಹಾಗೂ ಭಕ್ತರ ಮನೆಗಳಿಗೆ ಭೇಟಿ ನೀಡಿ ದೀಪಾವಳಿ ಪಾಡ್ಯದ ಪೂಜೆಯಲ್ಲಿ ಪಾಲ್ಗೊಂಡು ಭಕ್ತರಿಗೆ ಶುಭಾಶೀರ್ವಾದ ನೀಡಿದರು.



ನಂತರ ಮಾತನಾಡಿದ ಶ್ರೀಗಳು, ಕತ್ತಲಿನಿಂದ ಬೆಳಕಿನೆಡೆಗೆ ಸಾಗುವುದು, ಅಜ್ಞಾನ, ಅಂಧಕಾರ ಕಳೆದು ಜ್ಞಾನದ ಜ್ಯೋತಿ ಬೆಳಗಿಸುವುದು ಹಬ್ಬದ ವೈಶಿಷ್ಟ್ಯವಾಗಿದೆ. ದೀಪವು ಧರ್ಮ, ಸಂಸ್ಕೃತಿ, ಜ್ಞಾನ ಮತ್ತು ಆಧ್ಯಾತ್ಮದ ಸಂಕೇತವಾಗಿ ಎಲ್ಲರ ಬದುಕಿಗೂ ಸ್ಫೂರ್ತಿಯ ಚಿಲುಮೆಯಾಗಿದೆ. ದೀಪ ತಾನು ಉರಿದು ಜಗತ್ತಿಗೆಲ್ಲ ಬೆಳಕು ನೀಡುವಂತೆ ಮನುಷ್ಯ ನಿತ್ಯ ಬದುಕಿನಲ್ಲಿ ಬಡವರ, ಅಸಹಾಯಕರ ಸೇವೆ, ದಾನ-ಧರ್ಮ ರೂಢಿಸಿಕೊಳ್ಳುವುದರಿಂದ ಶಾಂತಿ, ಸಮೃದ್ಧಿಯ ಬದುಕನ್ನು ಹೊಂದಬಹುದು. ನಮ್ಮ ಸಂಸ್ಕೃತಿ, ಪರಂಪರೆಯ ಪ್ರತೀಕವಾಗಿರುವ ಹಬ್ಬಗಳನ್ನು ತಪ್ಪದೇ ಅರ್ಥಪೂರ್ಣವಾಗಿ ಆಚರಿಸಬೇಕು ಎಂದು ನುಡಿದರು.

ಶ್ರೀಗಳು ಪಟ್ಟಣದಲ್ಲಿನ ಭಕ್ತರ ಅಂಗಡಿಗಳಿಗೆ ಆಗಮಿಸಿದಾಗ ಸಂಪ್ರದಾಯದಂತೆ ಶ್ರೀಗಳ ಪಾದಪೂಜೆಯನ್ನು ನೆರವೇರಿಸಲಾಯಿತು. ಈ ವೇಳೆ ಜಿ.ಎಂ. ಮಹಾಂತಶೆಟ್ಟರ, ಆನಂದ ಮೆಕ್ಕಿ, ಚಂಬಣ್ಣ ಬಾಳಿಕಾಯಿ, ಡಾ. ಎಸ್.ಜಿ. ಹೂವಿನ, ರುದ್ರಪ್ಪ ವಡಕಣ್ಣವರ, ಗಂಗಾಧರ ಮೆಕ್ಕಿ, ಪ್ರವೀಣ ಹಾವೇರಿ, ಗದಿಗೆಪ್ಪ ಯತ್ನಳ್ಳಿ, ಚಂದ್ರಣ್ಣ ಮೆಕ್ಕಿ, ಗಂಗಾಧರ ಪುರಾಣಿಕಮಠ, ಶಿವಯೋಗಿ ವಡಕಣ್ಣವರ, ರೇಖಾ ವಡಕಣ್ಣವರ, ಸುನೀಲ ಮಹಾಂತಶೆಟ್ಟರ, ಮಲ್ಲಿಕಾರ್ಜುನ ಮಹಾಂತಶೆಟ್ಟರ, ಎಸ್.ಎಸ್. ಹೂವಿನ, ಡಾ. ಹಿಪ್ಪರಗಿ, ಡಾ. ಶೃತಿ ಹೂವಿನ ಮುಂತಾದವರಿದ್ದರು.

# ಶಿವಾನುಭವ ಕಾರ್ಯಕ್ರಮ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಸಮೀಪದ ಹರ್ಲಾಪೂರ ಕೊಟ್ಟೂರೇಶ್ವರ ಮಠದಲ್ಲಿ 302ನೇ ಶಿವಾನುಭ ಕಾರ್ಯಕ್ರಮದಲ್ಲಿ ಮಹರ್ಷಿ ವಾಲ್ಮೀಕಿ ಹಾಗೂ ರಾಣಿ ಕಿತ್ತೂರ ಚನ್ನಮ್ಮ ಜಯಂತಿಯನ್ನು ಆಚರಿಸಲಾಯಿತು.

ಸಾನ್ನಿಧ್ಯ ವಹಿಸಿದ್ದ ಡಾ. ಕೊಟ್ಟೂರೇಶ್ವರ ಸ್ವಾಮೀಜಿ ವಾಲ್ಮೀಕಿ ಹಾಗೂ ರಾಣಿ ಕಿತ್ತೂರ ಚನ್ನಮ್ಮಳ ಜಯಂತಿಗೆ ಶುಭಾಶಯ ಕೋರಿ, ಇವರ ತತ್ವ, ಜೀವನ ಚರಿತ್ರೆಯ ನೀತಿಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಸಲಹೆ ನೀಡಿದರು.

ಇದೇ ಸಂದರ್ಭದಲ್ಲಿ ಉತ್ತಮ ಶಿಕ್ಷಕ ಪ್ರಶಸ್ತಿ ಪಡೆದ ಟಿ.ಉದಯಕುಮಾರ ಹಾಗೂ ಖೋಖೋ ಪಂದ್ಯಾವಳಿಯಲ್ಲಿ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾದ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

ಕೆ.ಬಿ. ವೀರಾಪೂರ, ನಾಗೇಂದ್ರ ಅರ್ಕಸಾಲಿ ಅವರು ಸಂಗೀತ ಸೇವೆ ನೀಡಿದರು. ಡಾ. ಎಸ್.ಸಿ. ಸರ್ವಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸೋಮಣ್ಣ ಬಾಲಬಸವರ, ಶೇಖಪ್ಪ ಪೂಜಾರ, ಶಿವಾನಂದ ಪಟ್ಟೇದ, ಅಡಿವೆಪ್ಪ ಗೌಡಪ್ಪನವರ ಉಪಸ್ಥಿತರಿದ್ದರು. ರಾಮಣ್ಣ ಬೆಳಧಡಿ ಸ್ವಾಗತಿಸಿದರು. ವೆಂಕಟೇಶ ಜುಂಜಣಿ ನಿರೂಪಿಸಿದರು.

# ನಿಧನ ವಾರ್ತೆ

## ಚಂದ್ರಶೇಖರ ಸಂಗಪ್ಪ ಶಿರೋಳ



ಗದಗ: ನಗರದ ಮುಳಗುಂದ ರಸ್ತೆ ಹುಡ್ಕೋ ಕಾಲೋನಿ ನಿವಾಸಿ, ಹಿರಿಯ ನ್ಯಾಯವಾದಿಗಳಾದ ಚಂದ್ರಶೇಖರ ಸಂಗಪ್ಪ ಶಿರೋಳ (75) ನ.2ರಂದು ನಿಧನರಾದರು. ಮೃತರ ಅಂತ್ಯಕ್ರಿಯೆಯು ನ.3ರಂದು ಮೃತರ ಸ್ವಗ್ರಾಮ ರೋಣ ತಾಲೂಕ ಅಬ್ಬಿಗೇರಿ ಗ್ರಾಮದ ಜಮೀನಿನಲ್ಲಿ ದುಃಖತಪ್ತ ವಾತಾವರಣದಲ್ಲಿ ಜರುಗಿತು.

## ಮಾಹಾಂತಪ್ಪ ಮೆಣಸಿನಕಾಯಿ



ಮುಳಗುಂದ: ಪಟ್ಟಣದ ಬಂಡಿ ಓಣಿಯ ನಿವಾಸಿ ಮಹಾಂತಪ್ಪ ಮೆಣಸಿನಕಾಯಿ (79) ರವಿವಾರ ನಿಧನರಾದರು. ಮೃತರು ಇಬ್ಬರು ಪುತ್ರರು, ಓರ್ವ ಪುತ್ರಿ ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

# ಕ್ರಮವಾಗದ ಹೊರತು ಹೋರಾಟ ನಿಲ್ಲದು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಪೊಲೀಸ್ ಠಾಣೆಯ ಪಿಎಸ್‌ಐ ಈರಣ್ಣ ರಿತ್ತಿ ಅವರನ್ನು ಅಮಾನತುಗೊಳಿಸುವಂತೆ ಆಗ್ರಹಿಸಿ ಶ್ರೀರಾಮ ಸೇನಾ, ವಿವಿಧ ಹಿಂದೂ ಸಂಘಟನೆಗಳ ಕಾರ್ಯಕರ್ತರು, ಗೋಸಾವಿ ಸಮಾಜ ಬಾಂಧವರು ತಹಸೀಲ್ದಾರ ಕಚೇರಿ ಮುಂದೆ ನಡೆಸುತ್ತಿರುವ ನಿರಂತರ ಧರಣಿ ಸ್ಥಳಕ್ಕೆ ಶ್ರೀರಾಮಸೇನಾ ರಾಜ್ಯ ಕಾರ್ಯದರ್ಶಿ ರಾಜೂ ಖಾನಪ್ಪನವರ ಭೇಟಿ ನೀಡಿ ಧರಣಿ ನಿರತರಿಗೆ ಸಾಥ್ ನೀಡಿದರು.

ಈ ಸಂದರ್ಭದಲ್ಲಿ



ಮಾತನಾಡಿದ ಅವರು, ಇದೀಗ ಎಲ್ಲರೂ ದೀಪಾವಳಿ ಸಂಭ್ರಮದಲ್ಲಿದ್ದರೆ, ಗೋಸಾವಿ ಬಾಂಧವರು ಇಲ್ಲಿ ಪ್ರತಿಭಟನೆಯಲ್ಲಿ ಕುಳಿತುಕೊಳ್ಳುವಂತಾಗಿದೆ. ಕಳೆದ 4 ದಿನಗಳಿಂದ ಹೋರಾಟ ನಡೆಯುತ್ತಿದ್ದರೂ ಅಧಿಕಾರಿಗಳು ಈ ಕುರಿತಂತೆ ಸ್ಪಷ್ಟ ನಿರ್ಧಾರ ಪ್ರಕಟಿಸುತ್ತಿಲ್ಲ. ಜಿಲ್ಲೆಯ ಹಿರಿಯ ಪೊಲೀಸ್ ಅಧಿಕಾರಿಗಳು ಪಿಎಸ್‌ಐ ಮೇಲೆ ಕ್ರಮ ಕೈಗೊಳ್ಳಬೇಕು ಎನ್ನುವದು ನಮ್ಮ ಬೇಡಿಕೆಯಾಗಿದೆ. ಅವರ ಮೇಲೆ ಇನ್ನೊಂದು ಖಾಸಗಿ ದೂರನ್ನು ಸದ್ಯದಲ್ಲಿ ದಾಖಲಿಸಲಾಗುವುದು. ವಿಷಯ ಇನ್ನಷ್ಟು ದೊಡ್ಡದಾಗುವ ಮೊದಲೇ ಅವರ ಮೇಲೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಸದ್ಯದಲ್ಲಿ ಬೆಳಗಾವಿ ಸುವರ್ಣಸೌಧದಿಂದ ಐ.ಜಿ ಕಚೇರಿಯವರಗೆ ಸುಮಾರು 5 ಸಾವಿರ ಶ್ರೀರಾಮಸೇನೆ ಕಾರ್ಯಕರ್ತರು ಪಾದಯಾತ್ರೆ ನಡೆಸಿ ಕ್ರಮಕ್ಕೆ ಆಗ್ರಹಿಸಲಿದ್ದೇವೆ. ಪಿಎಸ್‌ಐ ಅವರ ಮೇಲೆ ಕ್ರಮವಾಗದ ಹೊರತು ಹೋರಾಟ ನಿಲ್ಲುವದಿಲ್ಲ. ಈ ಹೋರಾಟಕ್ಕೆ ಶ್ರೀರಾಮಸೇನಾ ಸಂಸ್ಥಾಪಕ ಪ್ರಮೋದ ಮುತಾಲಿಕ ಅವರು ನ.6 ಅಥವಾ 7ರಂದು ಪಾಲ್ಗೊಂಡು ಬೆಂಬಲ ಸೂಚಿಸಲಿದ್ದಾರೆ. ನ.10ಕ್ಕೆ ಶ್ರೀ ರಾಮ ಸೇನಾ ರಾಜ್ಯಾಧ್ಯಕ್ಷ ಗಂಗಾಧರ ಕುಲಕರ್ಣಿ ಅವರ ಆಗಮಿಸಲಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶ್ರೀರಾಮಸೇನೆ ತಾಲೂಕಾಧ್ಯಕ್ಷ ಈರಣ್ಣ ಪೂಜಾರ, ಬಸವರಾಜ ಚಕ್ರಸಾಲಿ, ಪ್ರಾಣೇಶ ವ್ಯಾಪಾರಿ, ಪ್ರವೀಣ ಕುಂಬಾರ, ಚಂದ್ರು ಕರ್ಜೇಕಣ್ಣವರ, ಮಂಜು ಕೋಡಳ್ಳಿ, ಬಾಳಪ್ಪ ಗೋಸಾವಿ ಮುಂತಾದವರಿದ್ದರು.

# ಯೋಗ ಕೋರ್ಸ್ ಪ್ರವೇಶ ಪ್ರಕಟಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡ ಇವರ ಮಾನ್ಯತೆಯಲ್ಲಿ ಎಸ್.ವಾಯ್.ಬಿ.ಎಂ.ಎಸ್. ಯೋಗ ಪಾಠಶಾಲೆಯ ಬಸವ ಯೋಗ ಮಹಾವಿದ್ಯಾಲಯ ಗದಗ ಇವರು 2024–25ನೇ ಸಾಲಿಗಾಗಿ ಸರ್ಟಿಫಿಕೇಟ್ ಕೋರ್ಸ್ ಇನ್ ಯೋಗ ಸ್ಟಡೀಸ್ ಮತ್ತು ಪಿ.ಜಿ. ಡಿಪ್ಲೋಮಾ ಇನ್ ಯೋಗ ಸ್ಟಡೀಸ್ ಕೋರ್ಸ್‌ಗಳ ಪ್ರವೇಶ ಪ್ರಕ್ರಿಯೆ ಪ್ರಾರಂಭವಾಗಿದೆ.

ಯೋಗ ಸರ್ಟಿಫಿಕೇಟ್ ಕೋರ್ಸ್‌ಗೆ ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ. ಹಾಗೂ ಪಿ.ಜಿ. ಡಿಪ್ಲೋಮಾ ಇನ್ ಯೋಗ ಸ್ಟಡೀಸ್ ಕೋರ್ಸ್‌ಗೆ ವಿದ್ಯಾರ್ಹತೆ ಯಾವುದೇ ಪದವಿ ಪಡೆದಿರಬೇಕು. ಅವಧಿ 1 ವರ್ಷ (ಎರಡು ಸೆಮಿಸ್ಟರ್), ವಯೋಮಿತಿ ನಿರ್ಬಂಧವಿರುವದಿಲ್ಲ.

ಪ್ರವೇಶ ಪಡೆಯಲಿಚ್ಛಿಸುವವರು ಹೆಚ್ಚಿನ ಮಾಹಿತಿಗಾಗಿ ಪ್ರಾಚಾರ್ಯರು, ಬಸವಯೋಗ ಮಹಾವಿದ್ಯಾಲಯ, (ಬಸವ ಪ್ರಭೆ ಕ್ಯಾಂಪಸ್), ಸಿದ್ಧಲಿಂಗ ನಗರ, ಗದಗ–582103 ದೂರವಾಣಿ ಸಂಖ್ಯೆ– 9448317188 ಈ ವಿಳಾಸದಲ್ಲಿ ಸಂಪರ್ಕಿಸಬೇಕೆಂದು ಪ್ರಾಚಾರ್ಯ ಕೆ.ಎಸ್. ಪಲ್ಲೇದ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

2024–25ನೇ ಸಾಲಿನ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಅಲೆಮಾರಿ/ ಅರೆ ಅಲೆಮಾರಿ ಪ್ರವರ್ಗ–1 ವಿದ್ಯಾರ್ಥಿಗಳಿಂದ ಅರ್ಹ ಪಿಯುಸಿ ಸಮಾನಾಂತರ, ಸಾಮಾನ್ಯ ಪದವಿ ಮತ್ತು ಸಂಯೋಜಿತ ಉಭಯ ಪದವಿ ಕೋರ್ಸ್‌ಗಳಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ, ಶುಲ್ಕ ವಿನಾಯತಿ, ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಕೊನೆಯ ದಿನವನ್ನು ನವೆಂಬರ್ 10 ರವರೆಗೆ ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಗದಗ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿಗಳ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

**'ಕರ್ನಾಟಕ ಸಂಭ್ರಮ' ಸಮಾರೋಪ ನಿಮಿತ್ತ ನಡೆದ ಸಂಗೀತ ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ**

# ಅರ್ಥಪೂರ್ಣ ಕರ್ನಾಟಕ ಸಂಭ್ರಮ ಸಮಾರಂಭ

■ ವಿಜಯಸಾಕ್ಷಿ ಸುದ್ದಿ, ಗದಗ

ಹುಯಿಲಗೋಳ ನಾರಾಯಣರ ಉದಯವಾಗಲಿ ಚೆಲುವ ಕನ್ನಡ ನಾಡು ಗೀತೆಯು ಕರ್ನಾಟಕ ಏಕೀಕರಣಕ್ಕೆ ಸ್ಫೂರ್ತಿ ಗೀತೆಯಾಗಿತ್ತು ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ನಗರದ ಐತಿಹಾಸಿಕ ವೀರನಾರಾಯಣ ದೇವಸ್ಥಾನದಲ್ಲಿ ರವಿವಾರ ಜಿಲ್ಲಾಡಳಿತ, ಪ್ರವಾಸೋದ್ಯಮ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಆಯೋಜಿಸಲಾಗಿದ್ದ ಕರ್ನಾಟಕ ಸಂಭ್ರಮ ಸಮಾರೋಪ ನಿಮಿತ್ತ ಸಂಗೀತ ಕಚೇರಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಬೆಳಗಾವಿಯಲ್ಲಿ 1924 ಡಿಸೆಂಬರ್ 26ರಂದು ಮಹಾತ್ಮ ಗಾಂಧೀಜಿಯವರು ಎಐಸಿಸಿ ಅಧ್ಯಕ್ಷತೆ ವಹಿಸಿದ್ದ ಸಮಾರಂಭದಲ್ಲಿ ಗಂಗೂಬಾಯಿ ಹಾನಗಲ್ ಅವರು ಉದಯವಾಗಲಿ ಚೆಲುವ ಕನ್ನಡ ನಾಡು ಗೀತೆಯನ್ನು ಹಾಡಿದ್ದರು ಎಂಬುದು ನಮ್ಮೆಲ್ಲರಿಗೂ ಅಭಿಮಾನವಾಗಿದೆ ಎಂದರು.

ಗದುಗಿನ ಇತಿಹಾಸದಲ್ಲಿ ಕರ್ನಾಟಕ ಸಂಭ್ರಮ–50 ಐತಿಹಾಸಿಕ ಮೈಲಿಗಲ್ಲು. ಕನ್ನಡ ಭಾಷೆಯನ್ನಾಡುವ ಕನ್ನಡಿಗರು ಒಂದೇ ರಾಜ್ಯದ ಆಳ್ವಿಕೆಯಲ್ಲಿ ಒಂದಾಗಬೇಕು ಎನ್ನುವ ಆಶಯದಂತೆ ನವಂಬರ್–1, 1956ರಂದು ಕರ್ನಾಟಕ ಏಕೀಕರಣವಾಯಿತು. ಗದುಗಿನ ಕಾಟನ್ ಸೇಲ್ ಸೊಸೈಟಿಯಲ್ಲಿ ಜರುಗಿದ 43ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾದ ಕೆ.ಜಿ. ಕುಂದಣಗಾರ ಮತ್ತು ಸ್ವಾಗತ ಸಮಿತಿಯ ಅಧ್ಯಕ್ಷರಾದ ಕೆ.ಎಚ್. ಪಾಟೀಲ ಅವರ ಆಶಯದಂತೆ ಮೈಸೂರು ರಾಜ್ಯಕ್ಕೆ ಕರ್ನಾಟಕ ರಾಜ್ಯವೆಂದು



ನಾಮಕರಣವಾಗಲಿ ಎಂದು ಸಮ್ಮೇಳನದಲ್ಲಿ ನಿರ್ಣಯ ಕೈಗೊಳ್ಳಲಾಯಿತು. ನಂತರ ಹೋರಾಟದ ಫಲವಾಗಿ 1973 ನವಂಬರ್ 01ರಂದು ಮೈಸೂರು ರಾಜ್ಯ 'ಕರ್ನಾಟಕ' ಎಂದು ನಾಮಕರಣವಾಯಿತು ಎಂದು ತಿಳಿಸಿದರು.

1973 ನವಂಬರ್ 1, 2 ಮತ್ತು 3ರಂದು ಜರುಗಿದ ಕರ್ನಾಟಕ ನಾಮಕರಣ ಮಹೋತ್ಸವವನ್ನು ಮರುಸೃಷ್ಟಿಸಿ, 2023ರ ನವಂಬರ್ 1, 2 ಮತ್ತು 3ರಂದು ಮೂರು ದಿನಗಳ ಕಾಲ ಗದಗನಲ್ಲಿ ಗತವೈಭವ ಮರುಕಳಿಸುವ ಐತಿಹಾಸಿಕ ಕಾರ್ಯಕ್ರಮಕ್ಕೆ ತಾವೆಲ್ಲ ಸಾಕ್ಷಿಯಾಗಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸೇರಿದಂತೆ ಸಚಿವ ಸಂಪುಟದ 20ಕ್ಕೂ ಹೆಚ್ಚು ಸಚಿವರು, ಕನ್ನಡಾಭಿಮಾನಿಗಳು ಕರ್ನಾಟಕ ಸಂಭ್ರಮ–50ರ ಕಾರ್ಯಕ್ರಮದಲ್ಲಿ ಪಾಲ್ಗೊಂಡು ನಾಮಕರಣ ಮಹೋತ್ಸವದ ಇತಿಹಾಸವನ್ನು ಮೆಲುಕು ಹಾಕಿದರು. ಇಂದು 'ಕರ್ನಾಟಕ ಸಂಭ್ರಮ– 50' ಒಂದು ವರ್ಷದ ಸಂಭ್ರಮಾಚರಣೆಯ ಸಮಾರೋಪ ಸಮಾರಂಭವಾಗಿದ್ದು, ಕನ್ನಡ ನಾಡು–ನುಡಿಯ ಅಭಿಮಾನ ಬೆಳೆಸಲು ಕರ್ನಾಟಕ ರಾಜ್ಯೋತ್ಸವದ ಈ ಸಂದರ್ಭ ಔಚಿತ್ಯಪೂರ್ಣವಾಗಿದೆ ಎಂದು ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ಖ್ಯಾತ ಗಾಯಕರಾದ ಕಾರಂತ, ನಾಗರಾಜ್ ಹಿರೇಕೊಳಚಿ ಹಾಗೂ ಸಂಗಮೇಶ್ ಕಲಬುರ್ಗಿ ಸಂಗೀತ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ನಡೆಸಿಕೊಟ್ಟರು. ಈ ಸಂದರ್ಭದಲ್ಲಿ ವಿ.ಪ ಸಭಾಧ್ಯಕ್ಷ ಬಸವರಾಜ ಹೊರಟ್ಟಿ, ಸರ್ಕಾರಿ ಮುಖ್ಯ ಸಚೇತಕ ಹಾಗೂ ಶಾಸಕ ಸಲೀಂ ಅಮ್ಮದ್, ಮಾಜಿ ಸಂಸದ ಐಜಿ ಸನದಿ, ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಗುರಣ್ಣ ಬಳಗಾನೂರ, ಎಂ.ಸಿ. ಶೇಖ, ರವಿ ಮೂಲಿಮನಿ, ವೀರನಾರಾಯಣ ತ್ರಿಕೋಟೇಶ್ವರ ದೇವಸ್ಥಾನ ಹಾಗೂ ಜುಮ್ಮಾ ಮಸೀದಿ ಸಮಿತಿಯ ಅಧ್ಯಕ್ಷ ಕೆ.ಡಿ. ಗೋಡಕಿಂಡಿ, ಕಾರ್ಯದರ್ಶಿ ಆನಂದ್ ಪೋತ್ನಿಸ್, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕಾಧ್ಯಕ್ಷ ಅಶೋಕ ಮಂದಾಲಿ, ಎಸ್.ಎನ್. ಬಳ್ಳಾರಿ, ಸಿದ್ದು ಪಾಟೀಲ, ಎಂ.ಆರ್. ಪಾಟೀಲ, ಪ್ರಭು ಬುರಬುರೆ, ಸುಜಾತ ದೊಡ್ಮನಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಪುರಾತತ್ವ ಇಲಾಖೆ ಆಯುಕ್ತ ದೇವರಾಜ್ ಸೇರಿದಂತೆ ಇತರೆ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

ನಾಮಕರಣ ಕರ್ನಾಟಕ ಸಂಭ್ರಮಾಚರಣೆಯನ್ನು ಗದುಗಿನಲ್ಲಿ 1973ರ ನವಂಬರ್–03ರಂದು ಹಂಪೆಯ ವಿರೂಪಾಕ್ಷೇಶ್ವರ ದೇವಾಲಯದಲ್ಲಿ ಪ್ರಜ್ವಲಿಸಿದ ಕನ್ನಡ ಜ್ಯೋತಿಯನ್ನು ಗದುಗಿನ ವೀರನಾರಾಯಣ ದೇವಸ್ಥಾನದಲ್ಲಿ ಸ್ವೀಕರಿಸಿದ ಅಂದಿನ ಮುಖ್ಯಮಂತ್ರಿ ದೇವರಾಜ ಅರಸ, ಮೈಸೂರಿನ ಅರಸರಾದ ಜಯಚಾಮರಾಜೇಂದ್ರ ಒಡೆಯರ ಹಾಗೂ ಅರಣ್ಯ ಮತ್ತು ಕೃಷಿ ಸಚಿವರಾದ ಕೆ.ಎಚ್. ಪಾಟೀಲ, ಪೌರಾಡಳಿತ ಸಚಿವರಾದ ಡಿ.ಕೆ. ನಾಯ್ಕರ, ಕನ್ನಡ ಮತ್ತು ಸಂಸ್ಕೃತಿ ಸಚಿವರಾದ ದೇವೇಂದ್ರಪ್ಪ ಗಾಳಪ್ಪ ಹಾಗೂ ಕನ್ನಡಾಭಿಮಾನಿಗಳು ವೀರನಾರಾಯಣ ದೇವಸ್ಥಾನದಿಂದ ಕಾಟನ್ ಸೇಲ್ ಸೊಸೈಟಿಯವರೆಗೆ ಮೆರವಣಿಗೆ ಮೂಲಕ ಬಂದು ಸಾರ್ವಜನಿಕ ಸಭೆ ನಡೆಸಿ ಕರ್ನಾಟಕ ನಾಮಕರಣ ಮಹೋತ್ಸವವನ್ನು ಸಂಭ್ರಮಿಸಿದ್ದು ಇತಿಹಾಸದಲ್ಲಿ ದಾಖಲಾರ್ಹ ಸಂಗತಿ ಎಂದು ಸಚಿವ ಎಚ್.ಕೆ. ಪಾಟೀಲ ನುಡಿದರು.



# ಡಿ.ದೇವರಾಜ ಅರಸು ಭವನ, ವಿದ್ಯಾರ್ಥಿನಿಲಯ ಕಟ್ಟಡ ಲೋಕಾರ್ಪಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಾಡಳಿತ, ತಾಲೂಕು ಪಂಚಾಯತ್, ತಾಲೂಕಾ ಹಿಂದುಳಿದ ಕಲ್ಯಾಣ ಇಲಾಖೆವರ ಸಂಯುಕ್ತ ಆಶ್ರಯದಲ್ಲಿ ಶೋಷಿತರ ಸಮಗ್ರ ಅಭಿವೃದ್ಧಿಯ ಸಾಮಾಜಿಕ ಕ್ರಾಂತಿಯ ಹರಿಕಾರ, ನೊಂದವರ ನಂದಾದೀಪ, ಸಾಧನೆಗಳ ಸರದಾರ, ಧೀಮಂತ ನಾಯಕ ಹಾಗೂ ಕರ್ನಾಟಕ ರಾಜ್ಯದ ಮಾಜಿ ಮುಖ್ಯಮಂತ್ರಿಗಳಾದ ದಿ. ಡಿ.ದೇವರಾಜ ಅರಸು ಭವನ ಹಾಗೂ ಡಿ.ದೇವರಾಜ ಅರಸು ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯದ ಲೋಕಾರ್ಪಣೆ ಕಾರ್ಯಕ್ರಮ ನೆರವೇರಿತು.



ಗದುಗಿನ ಸೂರ್ಯನಗರ ಡಾ.ಬಿ.ಆರ್.ಅಂಬೇಡ್ಕರ್ ಭವನದ ಹಿಂಭಾಗದಲ್ಲಿ ನಿರ್ಮಿಸಲಾದ ಕಟ್ಟಡವನ್ನು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಲೋಕಾರ್ಪಣೆಗೊಳಿಸಿದರು.

ಈ ಸಂದರ್ಭದಲ್ಲಿ ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ,

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ರವಿ ಲಕ್ಷ್ಮಣ ಗುಂಜೀಕರ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಯ್ಯ ಕೊರವನವರ, ಗದಗ–ಬೆಟಗೇರಿ ನಗರಸಭೆ ಆಯುಕ್ತ ಮಹೇಶ ಪೋತದಾರ, ನಿರ್ಮಿತಿ ಕೇಂದ್ರದ ಯೋಜನಾ ವ್ಯವಸ್ಥಾಪಕ ಜಿ.ವಿ. ಶಿರೋಳ, ಹಿಂದುಳಿದ ವರ್ಗಗಳ ತಾಲೂಕಾ ಕಲ್ಯಾಣಾಧಿಕಾರಿ ಡಾ.ಬಸವರಾಜ ಬಳ್ಳಾರಿ ಸೇರಿದಂತೆ ವಸತಿ ನಿಲಯದ ಮಕ್ಕಳು, ಅಧಿಕಾರಿಗಳು, ಸಿಬ್ಬಂದಿಗಳು ಹಾಜರಿದ್ದರು.

**ರಾಜ್ಯ ಸರಕಾರಿ ಪಡಿತರ ವಿತರಕರ ಸಂಘದ ರಾಜ್ಯಾಧ್ಯಕ್ಷ ಟಿ. ಕೃಷ್ಣಪ್ಪ ಹೇಳಿಕೆ**

# ಏಕರೂಪದ ಕಮಿಷನ್ ನಿರ್ಧಾರವಾಗಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಸರಕಾರ ಆಹಾರ ಭದ್ರತಾ ಕಾಯ್ದೆಯಡಿ 84 ಕೋಟಿ ಪಡಿತರದಾರರಿಗೆ ಉಚಿತವಾಗಿ ಆಹಾರ ಧಾನ್ಯ ವಿತರಿಸುತ್ತಿದೆ. ಆದರೆ ಪಡಿತರ ವಿತರಕರಿಗೆ ನೀಡಲಾಗುವ ಕಮಿಷನ್ ಹಣ ರಾಜ್ಯದಿಂದ ರಾಜ್ಯಕ್ಕೆ ವ್ಯತ್ಯಾಸವಿದೆ. ಈ ಹಿನ್ನೆಲೆಯಲ್ಲಿ ಪಡಿತರ ವಿತರಕರೂ ಆರ್ಥಿಕವಾಗಿ ಸ್ವಾವಲಂಬಿಯಾಗಬೇಕಾದರೆ ಪ್ರತಿ ಕ್ವಿಂಟಲ್‌ಗೆ ಏಕರೂಪದಲ್ಲಿ 250 ರೂ. ಕಮಿಷನ್ ಕೊಡುವ ನಿರ್ಧಾರ ಕೈಗೊಳ್ಳಬೇಕು ಎಂದು ರಾಜ್ಯ ಸರಕಾರಿ ಪಡಿತರ ವಿತರಕರ ಸಂಘದ ರಾಜ್ಯಾಧ್ಯಕ್ಷ ಟಿ. ಕೃಷ್ಣಪ್ಪ ಹೇಳಿದರು.



ಸೋಮವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಅನ್ನಭಾಗ್ಯದ 5 ಕೆಜಿ ಅಕ್ಕಿ ಬದಲಿಗೆ ಹಣ ನೀಡುವ ವ್ಯವಸ್ಥೆಯನ್ನು ಬಂದ್ ಮಾಡಿ, ಅದೇ ಹಣದಲ್ಲಿ ರೈತರು ಬೆಳೆದ ತೊಗರಿ ಬೇಳೆ, ಅಡುಗೆ ಎಣ್ಣೆ, ಸಕ್ಕರೆ, ಉಪ್ಪು ಸಹಿತ ಇನ್ನಿತರ ಪಡಿತರ ನೀಡುವಂತಾಗಬೇಕು ಎನ್ನುವುದು ಸಾರ್ವಜನಿಕರ ಒತ್ತಾಸೆಯಾಗಿದೆ.

ಈ ನಿಟ್ಟಿನಲ್ಲಿ ರಾಜ್ಯ ಸರಕಾರ ಸಮೀಕ್ಷೆ ನಡೆಸಿದಾಗ ಶೇ. 95ರಷ್ಟು ಜನ ಪಡಿತರ ನೀಡಬೇಕು ಎನ್ನುವ ಅಭಿಪ್ರಾಯ ದಾಖಲಿಸಿದ್ದಾರೆ. ಸಮೀಕ್ಷೆ ವರದಿ ಎರಡು ಬಾರಿ ಸಚಿವ ಸಂಪುಟವನ್ನು ತಲುಪಿದರೂ ಇದುವರೆಗೂ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿದರು.

ಪಡಿತರ ವಿತರಣೆ ಕುರಿತು ರಾಜ್ಯ ಸರ್ಕಾರ ತನ್ನದೇ ವರದಿಯನ್ನು ಸ್ವೀಕರಿಸುವುದನ್ನು ಗಮನಿಸಿದರೆ ಆಹಾರ ಸಚಿವ ಮುನಿಯಪ್ಪ ಅವರ ಜತೆ ಸಿದ್ದರಾಮಯ್ಯ ಸಿಟ್ಟಾಗಿದ್ದಾರೆ ಎಂಬ ಅಭಿಪ್ರಾಯ ಕೇಳಿಬರುತ್ತಿದೆ. ಮುನಿಯಪ್ಪ ಅವರ ಸೇವೆ ಪರಿಗಣಿಸಿದರೆ ಅವರು ಸಿಎಂ ಆಗುವ ಅಭ್ಯರ್ಥಿ. ಆದ್ದರಿಂದ ಅವರ ಬಗ್ಗೆ ಸಿದ್ದರಾಮಯ್ಯರಿಗೆ ನಿಷ್ಕಾಳಜಿ ಇದೆ. ಮುನಿಯಪ್ಪ ಅವರಿಗೆ ನಗದು ವರ್ಗಾವಣೆ ಬದಲಾಗಿ ಪಡಿತರ ನೀಡಬೇಕೆಂದು ಆಶಯವಿದೆ. ಆದರೆ ಸಿದ್ದರಾಮಯ್ಯ ಅವರು ತಿರಸ್ಕರಿಸುತ್ತಿದ್ದಾರೆ ಎಂದು ಕೃಷ್ಣಪ್ಪ ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಚನ್ನಕೇಶವ ಗೌಡ, ಪ್ರಭು ಶೆಟ್ಟರ, ದೇವರಾಜು, ನವೀನ ನಾಲವಾಡ, ಬಸವರಾಜ ಜಿ, ನರೇಶ ಬುರುಬುರೆ, ಲಿಂಗಯ್ಯ ಧನ್ನೂರಮಠ, ಗೋಪಾಲ್ ಕಲಬುಗಿರ್, ಮುತ್ತನಗೌಡ ಪಾಟೀಲ ಇತರರು ಇದ್ದರು.

# ಜನಪದ ಸಾಹಿತ್ಯ ಚಿರಸ್ಥಾಯಿಯಾಗಿದೆ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಗ್ರಾಮೀಣ ಪ್ರದೇಶದಲ್ಲಿ ಹಾಸುಹೊಕ್ಕಾಗಿರುವ ಜನಪದ ಕಲೆಯು ತನ್ನದೇ ಆದ ವೈಶಿಷ್ಟ್ಯತೆ ಮತ್ತು ಪರಂಪರೆಯನ್ನು ಹೊಂದಿದ್ದು, ಸೂರ್ಯ–ಚಂದ್ರರು ಇರುವವರೆಗೂ ಜನಪದ ಸಾಹಿತ್ಯ ಭೂಮಿಯ ಮೇಲೆ ಚಿರಸ್ಥಾಯಿಯಾಗಿರಲಿದೆ. ಇಂತಹ ಅದ್ಭುತ ಶಕ್ತಿಯನ್ನು ಹೊಂದಿದ ಜಾನಪದ ಕಲೆ ಮತ್ತು ಸಾಹಿತ್ಯವನ್ನು ಉಳಿಸಿ ಬೆಳೆಸುವಂತಹ ಕಾರ್ಯಕ್ರಮಗಳು ನಡೆಯುತ್ತಿರುವುದು ಶ್ಲಾಘನೀಯ ಎಂದು ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ ಹೇಳಿದರು.

ಅವರು ಶಿರಹಟ್ಟಿ ತಾಲೂಕಿನ ಕೊಂಚಿಗೇರಿ ಗ್ರಾಮದಲ್ಲಿ ಜರುಗಿದ ಹಜರತ್ ಮೆಹಬೂಬ ಸುಬಾನಿ ಅವರ ಉರುಸ್ ನಿಮಿತ್ತ ಶ್ರೀ ಕುಮಾರೇಶ್ವರ ಜನಪದ ಸಾಂಸ್ಕೃತಿಕ ಕಲಾ ತಂಡದ ಸಹಯೋಗದಲ್ಲಿ ಜರುಗಿದ ಜನಪದ ಉತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಇದೇ ಸಂದರ್ಭದಲ್ಲಿ 2023–24ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಗರಿಷ್ಠ ಅಂಕಗಳನ್ನು ಪಡೆದ 5 ವಿದ್ಯಾರ್ಥಿಗಳಿಗೆ, ವಿಶೇಷ ದಾನಿಗಳಿಗೆ, ಸಮಾಜಕ್ಕೆ ನಿಸ್ವಾರ್ಥ ಸೇವೆ ಸಲ್ಲಿಸಿದ ಮಹನೀಯರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದ ಸಾನ್ನಿಧ್ಯವನ್ನು ಪರಯ್ಯ ವಿಭೂತಿಮಠ, ಮುತ್ತಯ್ಯನವರ ಹಿರೇಮಠ, ಹಜರತ್ ಮೌಲಾನ ಮಹಮ್ಮದ ಇಕ್ಬಾಲ ವಹಿಸಿದ್ದರು. ಅಧ್ಯಕ್ಷತೆಯನ್ನು ಈರಣ್ಣ ಹುಡೇದ ವಹಿಸಿದ್ದರು. ಜಿ.ಪಂ ಮಾಜಿ ಸದಸ್ಯ ಶಿವಪ್ರಕಾಶ ಮಹಾಜನಶೆಟ್ಟರ, ಡಿ.ಕೆ. ಹೊನ್ನಪ್ಪನವರ, ಪರಮಪ್ಪ ಬೂದಿಹಾಳ, ಹೊನ್ನಪ್ಪ ಊದಣ್ಣವರ, ಸುರೇಶ ಕೊಡಬಾಳ, ಇಬ್ರಾಹಿಂಸಾಬ ನದಾಫ್, ಮಾಬುಸಾಬ ಗಾಡಗೋಳಿ, ಸುಭಾನಸಾಬ ಹಾವನೂರ, ದುರಗಮ್ಮ ಉಂದಲಮನಿ, ರಾಜೇಸಾಬ ನದಾಫ್, ಇಬ್ರಾಹಿಂಸಾಬ ಮತ್ತೂರ, ಕೆಂಚಪ್ಪ ಕೊಡಬಾಳ, ಅಶೋಕ ಬಡಿಗೇರ, ಮೌನೇಶ ಉದಣ್ಣವರ, ರಾಜಣ್ಣ ಹತ್ತಿಕಾಳ, ಈರಣ್ಣ ಕಬ್ಬಿಣದ, ಮೌಲಾಸಾಬ ಮತ್ತೂರ ಮುಂತಾದವರು ಉಪಸ್ಥಿತರಿದ್ದರು.

# ವಾರ್ಷಿಕ ಬಹುಮಾನಕ್ಕೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು ಕರ್ನಾಟಕ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಅಂಗ ಸಂಸ್ಥೆಯಾಗಿದ್ದು, ವಿಜ್ಞಾನ, ತಂತ್ರಜ್ಞಾನ, ಇಂಜನೀಯರಿಂಗ್ ಕೃಷಿ ಮತ್ತು ವೈದ್ಯಕೀಯ(ಸ್ಕೀಮ್) ವಿಷಯಗಳ ಸಂವಹನಕ್ಕೆ ದಿವ್ಯಾಂಗ ವ್ಯಕ್ತಿಯ ಅತ್ಯುತ್ತಮ ಪ್ರಯತ್ನಗಳನ್ನು ಗುರುತಿಸುವ ಉದ್ದೇಶದಿಂದ 2024–25ನೇ ಸಾಲಿನ ಕೆ.ಎಸ್.ಟಿ.ಎ. ವಾರ್ಷಿಕ ಬಹುಮಾನ (ದಿವ್ಯಾಂಗ)ಕ್ಕೆ ಅರ್ಹರಿಂದ ಅರ್ಜಿ/ ನಾಮ ನಿರ್ದೇಶನಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ/ ನಾಮನಿರ್ದೇಶನವನ್ನು ಸಲ್ಲಿಸಲು ಜನವರಿ 28, 2025 ಕೊನೆಯ ದಿನವಾಗಿರುತ್ತದೆ. ಆಯ್ಕೆಯಾದ ವ್ಯಕ್ತಿಗೆ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರವನ್ನು ನೀಡಿ ಗೌರವಿಸಲಾಗುವುದು.

ಹೆಚ್ಚಿನ ವಿವರಗಳಿಗಾಗಿ ಅಕಾಡೆಮಿಯ ವೆಬ್‌ಸೈಟ್ www.kstacademy.in ನಲ್ಲಿ ಮಾರ್ಗಸೂಚಿಯನ್ನು ವೀಕ್ಷಿಸಿ, ನಿಗದಿತ ಅರ್ಜಿ ನಮೂನೆಯನ್ನು ಡೌನ್ ಲೋಡ್ ಮಾಡಿಕೊಂಡು ಅರ್ಜಿ ಸಲ್ಲಿಸಬಹುದಾಗಿದೆ.


## ಗ್ರಾಮ ಪಂಚಾಯತ ಕಾರ್ಯಾಲಯ, ಹೊಂಬಳ

ತಾಲೂಕ :–ಗದಗ ಜಿಲ್ಲಾ:–ಗದಗ

ಸಂ.ಗ್ರಾ.ಪಂ.ಹೊ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024–25 ದಿನಾಂಕ:04/11/2024

–: ದರಪಟ್ಟಿ ಪ್ರಕಟಣೆ :–

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಹೊಂಬಳ ಇವರು 2024–25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಫಾರ್ಮಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ.ಸಂ. | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 1 | ಹೊಂಬಳ ಗ್ರಾಮದ ಎಲ್ ಎಸ್ ಎಮ್ ಸರಕಾರಿ ಪ್ರೌಢ ಶಾಲೆಯ ಶೌಚಾಲಯ ನಿರ್ಮಾಣ | 200000 | 500 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ;–05/11/2024 ರಿಂದ 15/11/2024 ರವರೆಗೆ, ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ;–16–11–2024 ಮುಂಜಾನೆ 10.00ಗಂಟೆಯಿಂದ ಮಧ್ಯಾಹ್ನ 2.30ಗಂಟೆವರೆಗೆ. ತೆರೆಯುವ ದಿನಾಂಕ ಹಾಗೂ ಸಮಯ:– 16–11–2024 ರ ಮಧ್ಯಾಹ್ನ 4.30ಗಂಟೆ.

**ನಿಬಂಧನೆಗಳು**

1)ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ (ರಜಾ ದಿನಗಳನ್ನು ಹೊರತುಪಡಿಸಿ) ಗ್ರಾಮ ಪಂಚಾಯತ ಕಛೇರಿಯಿಂದ ಮಾಹಿತಿ ಪಡೆಯಬಹುದಾಗಿದೆ.

ಸಹಿ ಆಗಿದೆ/– **ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು** ಗ್ರಾಮ ಪಂಚಾಯತಿ ಹೊಂಬಳ

ಸಹಿ ಆಗಿದೆ/– **ಅಧ್ಯಕ್ಷರು** ಗ್ರಾಮ ಪಂಚಾಯತಿ ಹೊಂಬಳ

## ಗ್ರಾಮ ಪಂಚಾಯತ ಕಾರ್ಯಾಲಯ, ಲಿಂಗದಾಳ

ತಾಲೂಕ :–ಗದಗ ಜಿಲ್ಲಾ:–ಗದಗ

ಸಂ.ಗ್ರಾ.ಪಂ.ಲಿ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024–25 ದಿನಾಂಕ:04/11/2024

–: ದರಪಟ್ಟಿ ಪ್ರಕಟಣೆ :–

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಲಿಂಗದಾಳ ಇವರು 2024–25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಫಾರ್ಮಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ.ಸಂ. | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 1 | ಲಿಂಗದಾಳ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಹೆಣ್ಣು ಮಕ್ಕಳ ಶಾಲೆಗೆ ಶೌಚಾಲಯ ನಿರ್ಮಾಣ | 200000 | 500 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು |
| 2 | ಲಿಂಗದಾಳ ಗ್ರಾಮದ ಸರಕಾರಿ ಪ್ರೌಢ ಶಾಲೆಯ ಕಂಪೌಂಡ ನಿರ್ಮಾಣ | 300000 | 500 | |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ;–05/11/2024 ರಿಂದ 15/11/2024ರವರೆಗೆ, ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ;–16–11–2024 ಮುಂಜಾನೆ 10.00ಗಂಟೆಯಿಂದ ಮಧ್ಯಾಹ್ನ 2.30ಗಂಟೆವರೆಗೆ. ತೆರೆಯುವ ದಿನಾಂಕ ಹಾಗೂ ಸಮಯ:– 16–11–2024 ರ ಮಧ್ಯಾಹ್ನ 4.30ಗಂಟೆ.

**ನಿಬಂಧನೆಗಳು**

1) ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ (ರಜಾ ದಿನಗಳನ್ನು ಹೊರತುಪಡಿಸಿ) ಗ್ರಾಮ ಪಂಚಾಯತ ಕಛೇರಿಯಿಂದ ಮಾಹಿತಿ ಪಡೆಯಬಹುದಾಗಿದೆ.

ಸಹಿ ಆಗಿದೆ/– **ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು** ಗ್ರಾಮ ಪಂಚಾಯತಿ ಲಿಂಗದಾಳ

ಸಹಿ ಆಗಿದೆ/– **ಅಧ್ಯಕ್ಷರು** ಗ್ರಾಮ ಪಂಚಾಯತಿ ಲಿಂಗದಾಳ


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka